ಸಂಪಾದಕ:ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳಪತ್ರಿಕೆ www.pavitrapraja.com

# ಪವಿತ್ರ ಪ್ರಜಾ

PAVITRAPRAJA Daily RNI:KARKAN: 2007/22780 ದಿನಪತ್ರಿಕೆ

e-mail:pavitrapraja@gmail.com KA/SK/CTA-806/21-23 Davanagere 9141920642

ಸಂಪುಟ:18 ಸಂಚಿಕೆ: 200 ದಿನಾಂಕ:19-06-2024 ಬುಧವಾರ ಪುಟ:4 ರೂ.2-00 ಉಪಸಂಪಾದಕರು: ಸುಪ್ರಿತ ಎಸ್. ಒಡೆಯರ್ ಎಂಬಿಎ Vol:18 Issuse:200 Date:19-06-2024 Wednesday page:4 Rs:2-00 subEditor: Supritha Wadeyar

## ಭವಾನಿಗೆ ಹೈಕೋರ್ಟ್ ನಿರೀಕ್ಷಣಾ ಜಾಮೀನು

ಬೆಂಗಳೂರು:-

ಲೈಂಗಿಕ ದೌರ್ಜನ್ಯಕ್ಕೊಳಗಾದ ಸಂತ್ರಸ್ತೆಯನ್ನು ಅಪಹರಣ ಪ್ರಕರಣದಲ್ಲಿ ವಿಶೇಷ ತನಿಖಾ ತಂಡ(ಎಸ್ಐಟಿ) ಅಧಿಕಾರಿಗಳ ವಿಚಾರಣೆ ಎದುರಿಸುತ್ತಿರುವ ಶಾಸಕ ಹೆಚ್.ಡಿ ರೇವಣ್ಣ ಅವರ ಪತ್ನಿ ಭವಾನಿ ರೇವಣ್ಣ ಅವರಿಗೆ ಹೈಕೋರ್ಟ್ ಇಂದು ನಿರೀಕ್ಷಣಾ ಜಾಮೀನು ನೀಡಿದೆ.

ಕಳೆದ ವಾರ ಸಂತ್ರಸ್ತೆ ಅಪಹರಣ ಪ್ರಕರಣದಲ್ಲಿ ವಾದ ಪ್ರತಿವಾದ ಆಲಿಸಿದ ತೀರ್ಪು ಕಾಯ್ದಿರಿಸಿದ ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರ ಹೈಕೋರ್ಟ್ ನ ಏಕ ಸದಸ್ಯಪೀಠವು ಪ್ರಕರಣದಲ್ಲಿ ಭವಾನಿಗೆ ಮಧ್ಯಂತರ ನಿರೀಕ್ಷಣಾ ಜಾಮೀನು ನೀಡಿದ್ದು, ಇಂದು ನಿರೀಕ್ಷಣಾ ಜಾಮೀನು ಅರ್ಜಿಯ ಅಂತಿಮ ಆದೇಶವನ್ನು ಪ್ರಕಟಿಸಿದೆ.



ಪೊಲೀಸರು ಮುಂದಿಟ್ಟ 85 ಪ್ರಶ್ನೆಗಳಿಗೆ ಭವಾನಿ ರೇವಣ್ಣ ಉತ್ತರಿಸಿದ್ದಾರೆ. ಹೀಗಾಗಿ ತನಿಖೆಗೆ ಸಹಕರಿಸಿಲ್ಲ ಎಂಬ ವಾದ ಒಪ್ಪಲಾಗುವುದಿಲ್ಲ.

ಪೊಲೀಸರಿಗೆ ಬೇಕಾದಂತಹ ಉತ್ತರವನ್ನೇ ಕೊಡಬೇಕೆಂದಿಲ್ಲ" ಎಂದು ಕೋರ್ಟ್ ಪೀಠ ಹೇಳಿದೆ.

"ಸಂತ್ರಸ್ತೆಗೆ ಭವಾನಿ ಊಟ, ಬಟ್ಟೆ ಕೊಟ್ಟಿಲ್ಲವೆಂಬ ವಾದವನ್ನೂ ಒಪ್ಪಲಾಗುವುದಿಲ್ಲ.

ಅಕ್ಕ ಬಟ್ಟೆ ಊಟ ಕಳುಹಿಸಿದ್ದರೆಂದು ಸಂತ್ರಸ್ತೆ ಹೇಳಿಕೆಯಿದೆ" ಎಂದೂ ಕೋರ್ಟ್ ಗಮನಿಸಿದೆ.

ಆದರೆ, ಭವಾನಿ ರೇವಣ್ಣ ಅವರು ಮೈಸೂರು ಮತ್ತು ಹಾಸನ ಜಿಲ್ಲೆ ಪ್ರವೇಶಿಸುವಂತಿಲ್ಲ ತನಿಖೆ ನಡೆಸಲು ಎಸ್ಐಟಿಗೆ ಸಹಕರಿಸಬೇಕು ಎಂಬ ಷರತ್ತನ್ನು ಪೀಠ ವಿಧಿಸಿದೆ.ಮಾಜಿ ಸಚಿವ ರೇವಣ್ಣ ಅವರಿಗೂ ದೇಶ ಬಿಟ್ಟು ಹೊರಹೋಗಬಾರದು ಎಂಬ ಆದೇಶ ವಿಧಿಸಲಾಗಿತ್ತು.

ಎರಡು ವಾರದ ಹಿಂದೆ, ಹೈಕೋರ್ಟ್ ಒಂದು ವಾರದ ಕಾಲ ಷರತ್ತುಬದ್ಧ ಮಧ್ಯಂತರ ಜಾಮೀನು ನೀಡಿದ ಬೆನ್ನಲ್ಲೇ ಎಸ್ಐಟಿ ವಿಚಾರಣೆಗೆ ಭವಾನಿ ಹಾಜರಾಗಿದ್ದರು. ಅಲ್ಲಿಯವರೆಗೂ ಭವಾನಿ ತಲೆಮರೆಸಿಕೊಂಡಿದ್ದರು. ಪ್ರಕರಣಕ್ಕೆ ಸಂಬಂಧಿಸಿ ನಿಯಮದ 41ಎ ಅಡಿ ಭವಾನಿ ರೇವಣ್ಣಗೆ ಎಸ್ಐಟಿ ಕಚೇರಿಗೆ ವಿಚಾರಣೆಗೆ ಹಾಜರಾಗುವಂತೆ ನೋಟೀಸ್ ನೀಡಲಾಗಿತ್ತು.

ಆದರೆ, ತಾವು ಹೊಳೆನರಸೀಪುರದ ಮನೆಯಲ್ಲಿ ಸಿಗುವುದಾಗಿ ಭವಾನಿ ತಿಳಿಸಿದ್ದರು. ಇದಕ್ಕಾಗಿ ಎಸ್ಐಟಿ ಟೀಮ್ ಅಲ್ಲಿಗೆ ತೆರಳಿದಾಗ, ಭವಾನಿ ಅಲ್ಲಿರದೆ ಕಣ್ಮರೆ-ಯಾಗಿದ್ದರು. ಹೀಗಾಗಿ ಭವಾನಿ ಬಂಧನಕ್ಕಾಗಿ ಅರೆಸ್ಟ್ ವಾರೆಂಟ್ ಜಾರಿ ಮಾಡಲಾಗಿತ್ತು.

ಸಂತ್ರಸ್ತೆ ನಮ್ಮ ಮನೆಯಲ್ಲಿ ಕೆಲಸ ಮಾಡುತ್ತಿದ್ದರು. ನಾನು ಅವರನ್ನು ಅಪಹರಣ ಮಾಡಿಸಿಲ್ಲ. ಆ ಪ್ರಕರಣ-ಕ್ಕೂ ನನಗೂ ಸಂಬಂಧವಿಲ್ಲ. ನನ್ನನ್ನು ರಾಜಕೀಯವಾಗಿ ಮುಗಿಸಲು ಯಾರೋ ಸಂಚು ರೂಪಿಸಿದ್ದು, ಇದರ ಭಾಗವಾಗಿ ಈ ಆರೋಪ -3ನೇ ಪುಟಕ್ಕೆ

## ಸಂಪನ್ಮೂಲಕ್ಕೆ 25 ಸಾವಿರ ಆಸ್ತಿ ಬಳಕೆಗೆ ವಿರೋಧ

ಬೆಂಗಳೂರು:-

ಸಂಪನ್ಮೂಲ ಕ್ರೋಢಿಕರಣಕ್ಕೆ 25 ಸಾವಿರ ಎಕರೆ ಸಾರ್ವಜನಿಕ ಭೂಮಿ ಆಸ್ತಿಯನ್ನು ಬಳಸಿಕೊಳ್ಳಲು ಹೊರಟಿರುವ ರಾಜ್ಯಸರ್ಕಾರದ ವಿರುದ್ಧ ಕಿಡಿಕಾರಿರುವ ವಿಪಕ್ಷ ನಾಯಕ ಆರ್. ಅಶೋಕ್ ಮುಂದೊಂದು ದಿನ ಈ ಸರ್ಕಾರವನ್ನು ವಿಧಾನಸೌಧವನ್ನೇ ಅಡವಿಟ್ಟರೂ ಹರಾಜು ಹಾಕಿದರೂ ಅಚ್ಚರಿ ಪಡಬೇಕಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

**ಅಶೋಕ್ ಕಿಡಿ**



ಅಸಮರ್ಥ ಮುಖ್ಯಂಮಂತ್ರಿರವರೆ ಪಾಪರ್ ಸರ್ಕಾರವನ್ನು ಉಳಿಸಿಕೊಳ್ಳಲು 25 ಸಾವಿರ ಎಕರೆ ಸಾರ್ವಜನಿಕ ಆಸ್ತಿಯನ್ನು ಬಳಸಿಕೊಳ್ಳಲು ಹೊರಟಿದ್ದೀರಲ್ಲ, 15 ಬಜೆಟ್ ಮಂಡಿಸಿರುವ ಸ್ವಯಂ ಘೋಷಿತ ಆರ್ಥಿಕ ತಜ್ಞರಾದ ತಮಗೆ ರಾಜ್ಯದ ಬಜೆಟ್ ಮಂಡಿಸುವಾಗ ಸರ್ಕಾರದ ಆದಾಯ ವೆಚ್ಚದ ಬಗ್ಗೆ ಜ್ಞಾನವಿರಲಿಲ್ಲವೆ, ಬಜೆಟ್ ಮಂಡಿಸಿದ ನಾಲ್ಕೇ ತಿಂಗಳಿಗೆ ಪೆಟ್ರೋಲ್-ಡೀಸೆಲ್ ಬೆಲೆ ಏರಿಸಿದ್ದಾಯಿತು. ಈಗ 25 ಸಾವಿರ ಎಕರೆ ಆಸ್ತಿಯನ್ನು ಬಳಸಿಕೊಳ್ಳಲು ಹೊರಟಿದ್ದೀರಲ್ಲ ಇದೇನಾ ಬಜೆಟ್ ರಚನೆಯ ಬಗ್ಗೆ ತಮಗಿರುವ ಪಾಂಡಿತ್ಯ ಇದೇನಾ ತಾವು ಜಂಭ ಕೊಚ್ಚಿಕೊಳ್ಳುವ ಬುದ್ಧಿವಂತೆಯೇ ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಹರಿಹಾಯ್ದಿದ್ದಾರೆ.

ಮಾಜಿ ಪರ ದೇವೇಗೌಡರಿಂದ ಹಿಡಿದು ಈಗಿನ ಡಿಸಿಎಂ ಡಿ.ಕೆ ಶಿವಕುಮಾರ್‌ವರೆಗೆ ಅನೇಕರ ಕೃಪೆಯಿಂದ ಮುಖ್ಯಮಂತ್ರಿಯಾಗಿ, ಉಪಮುಖ್ಯಮಂತ್ರಿಯಾಗಿ, ಮಂತ್ರಿಯಾಗಿ ಹತ್ತಾರು ವರ್ಷ ಅಧಿಕಾರ ಅನುಭವಿಸಿದ್ದೀರಲ್ಲ ಕರ್ನಾಟಕಕ್ಕೆ ಕನ್ನಡಿಗರಿಗೆ ನಿಮ್ಮ ಕೊಡುಗೆ ಏನು ಎಂದು ಅಶೋಕ್ -3ನೇ ಪುಟಕ್ಕೆ

## ರೇಣುಕಾಸ್ವಾಮಿ ಹತ್ಯೆ ಖಂಡಿಸಿ ವೀರಶೈವ ಜಂಗಮ ಸಮಾಜ ಪ್ರತಿಭಟನೆ

ದಾವಣಗೆರೆ:-

ಚಿತ್ರದುರ್ಗದ ರೇಣುಕಾಸ್ವಾಮಿ ಎಂಬುವರನ್ನು ಕ್ರೂರವಾಗಿ ಹತ್ಯೆ ಮಾಡಿರುವ ನಟ ದರ್ಶನ್ ಹಾಗೂ ಸಹಚರರಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಒತ್ತಾಯಿಸಿ ವೀರಶೈವ ಜಂಗಮ ಸಮಾಜದ ಸದಸ್ಯರು ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು.

ನಗರದ ಜಯದೇವ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಕಾರರು ದರ್ಶನ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. 'ದರ್ಶನ್ ಗಡಿಪಾರು ಮಾಡಿ', 'ರಾಜಕೀಯ ಒತ್ತಡ-ಕ್ಕೆ ಮಣಿಯಬೇಡಿ' ಹಾಗೂ 'ರೇಣುಕಾಸ್ವಾಮಿ ಸಾವಿಗೆ ನ್ಯಾಯ ಕೊಡಿ' ಎಂದು ಘೋಷಣೆ ಕೂಗಿದರು. 'ರೇಣುಕಾಸ್ವಾಮಿ ತಪ್ಪು ಮಾಡಿದ್ದು ಕಂಡುಬಂದಿದ್ದರೆ ಪೊಲೀಸರಿಗೆ ದೂರು ನೀಡುವ ಅವಕಾಶ ದರ್ಶನ್‌ಗೆ ಇತ್ತು. ಕಾನೂನು ಕೈಗೆತ್ತಿಕೊಂಡು ಕ್ರೂರವಾಗಿ ವರ್ತಿಸಿದ ರೀತಿಯನ್ನು ಗಮನಿಸಿದರೆ ದರ್ಶನ್ ಕರಾಳ ಮುಖ ಬಯಲಿಗೆ ಬಂದಿದೆ. ಅಮಾಯಕ ವ್ಯಕ್ತಿಗೆ ಚಿತ್ರಹಿಂಸೆ




ನೀಡಿ ಕೊಲೆ ಮಾಡಿದ್ದು ಖಂಡನೀಯ. ಅತ್ಯಂತ ಪ್ರಭಾವಿಯಾಗಿರುವ ದರ್ಶನ್ ವಿರುದ್ಧ ಪೊಲೀಸರು ಕೈಗೊಂಡಿರುವ ಕಾನೂನು ಕ್ರಮ ಶ್ಲಾಘನೀಯ' ಎಂದು ವೀರಶೈವ ಜಂಗಮ ಸಮಾಜದ ಮುಖಂಡ ಎನ್.ಎ.ಮುರುಗೇಶ್ ತಿಳಿಸಿದರು.

'ದರ್ಶನ್ ಬಂಧನದಿಂದ ಸಮಾಜಕ್ಕೆ ಉತ್ತಮ ಸಂದೇಶ ರವಾನೆಯಾಗಿದೆ. ತಪ್ಪು ಮಾಡಿದ ವ್ಯಕ್ತಿ ಕಾನೂನು ಕುಣಿಕೆಯಿಂದ ನುಣಿಚಿಕೊಳ್ಳಲು ಸಾಧ್ಯವಿಲ್ಲ ಎಂಬುದಕ್ಕೆ ಇದು ಸಾಕ್ಷಿಯಾಗಿದೆ. ಮಾನವೀಯ ಮೌಲ್ಯಗಳನ್ನು ಗಾಳಿಗೆ ತೂರಿ ವರ್ತಿಸಿದ ರೀತಿ ಮನಕಲಕಿದೆ. ರೇಣುಕಾಸ್ವಾಮಿ ಸಾವಿಗೆ ಕೇವಲ ಅನುಕಂಪ ತೋರದೇ ಆರ್ಥಿಕ ನೆರವು ನೀಡಬೇಕು' ಎಂದು ಹೇಳಿದರು.

ಸಾಹಿತಿ ಭಾ.ಮ.ಬಸವರಾಜಯ್ಯ, 'ತಪ್ಪು ಮಾಡಿದ ವ್ಯಕ್ತಿಗೆ ಶಿಕ್ಷೆ ವಿಧಿಸಲು ನೆಲದ ಕಾನೂನು ಇದೆ. ದರ್ಶನ್ ಕಾನೂನು ಪ್ರಕಾರ ನಡೆದುಕೊಳ್ಳುವ ಬದಲು ಕಾನೂನನ್ನೇ ಕೈಗೆತ್ತಿಕೊಂಡಿ-ದ್ದು ಅಕ್ಷಮ್ಯ. ಚಿತ್ರಹಿಂಸೆ ಕೊಟ್ಟು ಕೊಲೆ ಮಾಡಿರುವುದು ಕ್ರೌರ್ಯದ ಪರಮಾವಧಿ. -3ನೇ ಪುಟಕ್ಕೆ

## ಮೊಬೈಲ್ ಗೀಳಿಗೆ ಎನ್ಎಸ್ಎಸ್ ಪರಿಹಾರ: ಎಂ.ಬಿ.ದಳಪತಿ

ದಾವಣಗೆರೆ:-

ವಿದ್ಯಾರ್ಥಿಗಳು ಮೊಬೈಲ್ ಫೋನ್ ಗೀಳಿಗೆ ಬಲಿಯಾಗದೇ ಪಠ್ಯೇತರ ಚಟುವಟಿಕೆಯಲ್ಲಿ ಪಾಲ್ಗೊಳ್ಳಬೇಕು. ಎನ್ಎಸ್ಎಸ್‌ನಂತಹ ಸೇವಾ ಚಟುವಟಿಕೆಗಳು ವಿದ್ಯಾರ್ಥಿಗಳ ಬದುಕನ್ನು ವಿಕಸನಗೊಳಿಸುತ್ತವೆ ಎಂದು ಕರ್ನಾಟಕ ವಿಶ್ವವಿದ್ಯಾಲಯದ ಎನ್ಎಸ್ಎಸ್ ಸಂಯೋಜನಾಧಿಕಾರಿ ಎಂ.ಬಿ.ದಳಪತಿ ಅಭಿಪ್ರಾಯಪಟ್ಟರು.

ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ನಡೆಯುತ್ತಿರುವ ರಾಜ್ಯ ಮಟ್ಟದ ಎನ್ಎಸ್ಎಸ್ ಯುವಜನೋತ್ಸವದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, 'ಯುವಜನೋತ್ಸವವು ರಾಜ್ಯದ ಬೇರೆ ಬೇರೆ ಪ್ರದೇಶದ ಸಾಂಸ್ಕೃತಿಕ ಕಲೆ, ಸಾಹಿತ್ಯ, ಸಂಸ್ಕೃತಿ ಮತ್ತು ಸಂಪ್ರದಾಯಗಳ ಪರಿಚಯ ಮಾಡಿಕೊಡುತ್ತದೆ. ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಬೆಳೆಸಲು ಸಹಕಾರಿಯಾಗಿದೆ' ಎಂದು ಹೇಳಿದರು.

'ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಗಳಲ್ಲಿ




ಭಾಗವಹಿಸಿ ಪ್ರತಿಭೆಯನ್ನು ಪ್ರದರ್ಶಿಸಬೇಕು.

ಈ ಮೂಲಕ ಉತ್ತಮ ಅವಕಾಶಗಳನ್ನು ಪಡೆಯಬೇಕು. ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಸಮಯಪಾಲನೆ, ಶಿಸ್ತು, ಕರ್ತವ್ಯ ನಿಷ್ಠೆ ಮತ್ತು ವ್ಯಕ್ತಿತ್ವ ವಿಕಸನಕ್ಕೆ ನೆರವಾಗುತ್ತದೆ. ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳ ಜೊತೆಗೆ ಸ್ನೇಹ, ವಿಶ್ವಾಸಾರ್ಹತೆ ಮತ್ತು ಬಾಂಧವ್ಯವನ್ನು ಬೆಸೆಯಲು ಯುವಜನೋತ್ಸವ ಉತ್ತಮ ವೇದಿಕೆ' ಎಂದು ಹೇಳಿದರು.

ಯುವಜನೋತ್ಸವ ಸಂಯೋಜನಾಧಿಕಾರಿ ಅಶೋಕಕುಮಾರ ವೀ.ಪಾಳೇದ, 'ವಿದ್ಯಾರ್ಥಿಗಳ ನಡುವೆ ಸೌಹಾರ್ದಯುತ ಸಂಬಂಧ ಬೆಸೆಯುವುದು ಎನ್ಎಸ್ಎಸ್ ಮುಖ್ಯ ಉದ್ದೇಶ. ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಇದು ಪರಿಚಯಿಸುತ್ತದೆ' ಎಂದು ಹೇಳಿದರು.

ಕಾರ್ಯಕ್ರಮ ಅಧಿಕಾರಿಗಳಾದ ಪ್ರೊ.ಪಿ.ಅಣ್ಣೇಶ, ಜಿ.ಮಂಜುನಾಥ, ತಿಪ್ಪೇಸ್ವಾಮಿ, ಲೋಕೇಶ ನಾಯಕ ಇದ್ದರು.

## ಅಮಿತ್ ಶಾ ವಿರುದ್ಧ ಟೀಕೆ: ರಾಹುಲ್ ಗಾಂಧಿ ವಿರುದ್ಧದ ಮಾನ ಹಾನಿ ಪ್ರಕರಣದ ವಿಚಾರಣೆ ಜೂ. 26ಕ್ಕೆ ಮುಂದೂಡಿಕೆ



ಸುಲ್ತಾನ್‌ಪುರ:-

ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಆಕ್ಷೇಪಾರ್ಹ ಹೇಳಿಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ದಾಖಲಾಗಿರುವ ಮಾನನಷ್ಟ ಮೊಕದ್ದಮೆ ಪ್ರಕರಣದ ವಿಚಾರಣೆಯನ್ನು ಕೋರ್ಟ್ ಮಂಗಳವಾರ ಜೂನ್ 26ಕ್ಕೆ ಮುಂದೂಡಿದೆ.

ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ರಾಹುಲ್ ಗಾಂಧಿ ವಿರುದ್ಧದ ಮಾನಹಾನಿ ಪ್ರಕರಣದ ವಿಚಾರಣೆ ನಡೆಯುತ್ತಿದ್ದು, ಸಂಬಂಧಪಟ್ಟ ನ್ಯಾಯಾಧೀಶರು ರಜೆಯಲ್ಲಿರುವ ಕಾರಣ ಜೂನ್ 26ಕ್ಕೆ ವಿಚಾರಣೆ ನಿಗದಿಪಡಿಸಲಾಗಿದೆ.

ಬಿಜೆಪಿ ನಾಯಕ ವಿಜಯ್ ಮಿಶ್ರಾ ಅವರು ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಿದ್ದರು. ಅರ್ಜಿದಾರರ ಪರ ವಕೀಲರಾದ ಸಂತೋಷ್ ಕುಮಾರ್ ಪಾಂಡೆ ಅವರು, ಮಂಗಳವಾರದಂದು ಪ್ರಕರಣದ ವಿಚಾರಣೆಗೆ ಪಟ್ಟಿ ಮಾಡಲಾಗಿತ್ತು. ಆದರೆ ಸಂಬಂಧಪಟ್ಟ ನ್ಯಾಯಾಧೀಶರು ರಜೆಯಲ್ಲಿರುವ ಕಾರಣ ಜೂನ್ 26 ಕ್ಕೆ ಮುಂದೂಡಲಾಗಿದೆ ಎಂದು ಹೇಳಿದರು.

ಈ ಮಾನನಷ್ಟ ಮೊಕದ್ದಮೆ ಪ್ರಕರಣ ಸಂಬಂಧ ಫೆಬ್ರವರಿ 20 ರಂದು ಕಾಂಗ್ರೆಸ್ ನಾಯಕ ರಾಹುಲ್ -3ನೇ ಪುಟಕ್ಕೆ

## ದಾವಣಗೆರೆ: 1.52 ಲಕ್ಷ ವಿವಿಧ ಪ್ರಭೇದದ ಗಿಡಗಳು ಮಾರಾಟಕ್ಕೆ ಲಭ್ಯ



ದಾವಣಗೆರೆ:-

ತೀವ್ರ ಬರ, ಅಂತರ್ಜಲ ಕುಸಿತ, ಬೋರ್‌ವೆಲ್‌ಗಳ ವೈಫಲ್ಯದ ಪ್ರಮಾಣದಲ್ಲಿನ ಹೆಚ್ಚಳದಿಂದಾಗಿ ಕಳೆದ ವರ್ಷ (2023ರಲ್ಲಿ) ತೋಟಗಾರಿಕೆ ಇಲಾಖೆಯ ವಿವಿಧ ಪ್ರಭೇದದ ಗಿಡಗಳ ಮಾರಾಟದಲ್ಲಿ ತೀವ್ರ ಕುಸಿತಗೊಂಡಿದೆ.

ರೈತರಿಗೆ ಕಡಿಮೆ ದರದಲ್ಲಿ ಉತ್ತಮ ಗುಣಮಟ್ಟದ ಸಸಿಗಳನ್ನು ಮಾರಾಟ ಮಾಡುವ ತೋಟಗಾರಿಕೆ ಇಲಾಖೆಯು 2022-23ನೇ ಸಾಲಿನಲ್ಲಿ 1.95 ಲಕ್ಷ ವಿವಿಧ ಪ್ರಭೇದದ ಸಸಿಗಳನ್ನು ಬೆಳೆಸಿ, ಮಾರಾಟಕ್ಕೆ ಮುಂದಾಗಿತ್ತು. ಆದ-ರೆ, ಮಳೆ ಕೊರತೆಯಿಂದಾಗಿ ಸಾಕಷ್ಟು ಗಿಡಗಳು ಮಾರಾಟವಾಗದೇ ಉಳಿದಿವೆ. ಮುಖ್ಯವಾಗಿ ಶೇ 90 ರಷ್ಟು ಅಡಿಕೆ ಗಿಡಗಳು ಮಾರಾಟವಾಗದೇ ಉಳಿದಿವೆ.

ಇಲಾಖೆಯ ಸಸ್ಯಕ್ಷೇತ್ರಗಳಲ್ಲಿ (ನರ್ಸರಿ) ಮಾರಾಟವಾಗದೇ ಉಳಿದ ಗಿಡಗಳನ್ನು ಈ ವರ್ಷ ಮಾರಾಟ ಮಾಡುವ ಉದ್ದೇಶದಿಂದ ಈ ಬಾರಿ ಸಸಿಗಳನ್ನು ಬೆಳೆಸುವ ಪ್ರಮಾಣದಲ್ಲಿ (ಗುರಿ) ಇಳಿಕೆ ಕಂಡಿದೆ. 2023-24ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯು 1,52,167 ಸಸಿಗಳನ್ನು ಮಾತ್ರ ಬೆಳೆಸಿ ರೈತರಿಗೆ ಮಾರಾಟ ಮಾಡಲು ಮುಂದಾಗಿದೆ.

ತೋಟಗಾರಿಕೆ ಇಲಾಖೆಯು ವಿವಿಧ ಸಸಿಗಳನ್ನು ಮಾತ್ರವಲ್ಲದೇ ಅಲಂಕಾರಿಕ ಗಿಡಗಳನ್ನೂ ಸಸ್ಯಕ್ಷೇತ್ರಗಳಲ್ಲಿ (ನರ್ಸರಿ) ವೈಜ್ಞಾನಿಕ ಮಾದರಿಯಲ್ಲಿ -3ನೇ ಪುಟಕ್ಕೆ

## ಸುಗಮ ಸಂಗೀತ ಕನ್ನಡದ ಅಸ್ಮಿತೆ: ಕಿಕ್ಕೇರಿ ಕೃಷ್ಣಮೂರ್ತಿ

ದಾವಣಗೆರೆ:-



ವಿಶ್ವದ ಬೇರೆ ಯಾವ ಭಾಗದಲ್ಲಿಯೂ ಇರದ ಕಲಾ ಪ್ರಕಾರ ಸುಗಮ ಸಂಗೀತ. ಕನ್ನಡದ ಅಸ್ಮಿತೆಯಂತೆ ಇರುವ ಸುಗಮ ಸಂಗೀತದ ಬಗ್ಗೆ ಕನ್ನಡಿಗರು ಹೆಮ್ಮೆ ಪಡಬೇಕು ಎಂದು ಕರ್ನಾ ಟಕ ಸುಗಮ ಸಂಗೀತ ಪರಿಷತ್ತಿನ ಕಾರ್ಯಾಧ್ಯಕ್ಷ ಕಿಕ್ಕೇರಿ ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು. ಇಲ್ಲಿನ ಕುವೆಂಪು ಕನ್ನಡ ಭವನದಲ್ಲಿ ಕರ್ನಾಟಕ ಸುಗಮ ಸಂಗೀತ ಪರಿಷತ್ತು, ಅನುಶ್ರೀ ಸಂಗೀತ ಶಾಲೆ ಹಾಗೂ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ವತಿಯಿಂದ ಸೋಮವಾರ ಏರ್ಪಡಿಸಿದ್ದ 'ಸ್ವರಾಭರಣ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ಮರಾಠಿ ರಂಗಗೀತೆ ಅನುಸರಿಸಿ ಹುಟ್ಟಿದ ಸುಗಮ ಸಂಗೀತ ಪ್ರತ್ಯೇಕ ಅಸ್ಮಿತೆ ಉಳಿಸಿಕೊಂಡಿದೆ. ಹಿಂದಿ, ತಮಿಳು, ಮರಾಠಿ ಸೇರಿ ಬೇರೆ ಯಾವುದೇ ಭಾಷೆಯಲ್ಲಿ ಈ ಕಲಾ ಪ್ರಕಾರ ಇಲ್ಲ. ಬದುಕಿಗೆ ಔಷಧ ನೀಡುವ ಗುಣ ಈ ಸಂಗೀತಕ್ಕೆ ಇದೆ. ಸ್ನೇಹ, ಪ್ರೀತಿಯ ಅನ್ವರ್ಥನಾಮ ಕೂಡ ಸುಗಮ ಸಂಗೀತ' ಎಂದು ಹೇಳಿದರು.

'ನಾನೊಬ್ಬ ಸಂಗೀತಗಾರ ಎಂಬ ಅಹಂಕಾರ ಮೊದಲು ಇತ್ತು. ಸುಗಮ ಸಂಗೀತವನ್ನು ಹಾಡುವುದು ಎಷ್ಟು ಕಷ್ಟ ಎಂಬುದು ಗಾಯಕ ಸಿ.ಅಶ್ವಥ್ ಗರಡಿಗೆ ಬಂದಾಗ ತಿಳಿಯಿತು. ಶಾಸ್ತ್ರೀಯ ಸಂಗೀತ ಕಲಿತಾಕ್ಷಣ ಸುಗಮ ಸಂಗೀತ ಸುಲಭವಾಗಿ ನಿಲುಕದು. ನಿಜಕ್ಕೂ ಇದೊಂದು ತಪಸ್ಸು. ಸುಗಮ ಸಂಗೀತ ಬದುಕಿನ -3ನೇ ಪುಟಕ್ಕೆ

# ಟಿ20 ವಿಶ್ವಕಪ್: ಬಾಂಗ್ಲಾದೇಶಕ್ಕೆ ಮಾಡು ಮಡಿ ಪಂದ್ಯ




ಕಿಂಗ್‌ಸ್ಟೌನ್ (ಸೇಂಟ್ ವಿನ್ಸೆಂಟ್):– ಬಾಂಗ್ಲಾದೇಶ ತಂಡ ಟಿ20 ವಿಶ್ವಕಪ್ 'ಡಿ' ಗುಂಪಿನ ಪಂದ್ಯದಲ್ಲಿ ಸೋಮವಾರ ನೇಪಾಳ ತಂಡವನ್ನು ಎದುರಿಸಲಿದ್ದು, ಸೂಪರ್ ಎಂಟರಲ್ಲಿ ಸ್ಥಾನ ಪಡೆಯುವತ್ತ ಲಕ್ಷ್ಯ ಇರಿಸಿಕೊಂಡಿದೆ. ಬಾಂಗ್ಲಾದೇಶ ಮೂರು ಪಂದ್ಯಗಳಿಂದ ನಾಲ್ಕು ಪಾಯಿಂಟ್ಸ್ ಗಳಿಸಿದ್ದು, ಗೆದ್ದರೆ ಮಾತ್ರ ಅದರ ಹಾದಿ ಸುಲಭ. ಆದರೆ ಸ್ಫೂರ್ತಿಯುತ ಪ್ರದರ್ಶನ ನೀಡಿರುವ ನೇಪಾಳ ತಂಡವನ್ನು ಹಗುರವಾಗಿ ಪರಿಗಣಿಸುವಂತಿಲ್ಲ. ಹಿಮಾಲಯ ಮಡಿಲಿನ ಈ ಪುಟ್ಟ ರಾಷ್ಟ್ರ ಈಗಾಗಲೇ ಸೂಪರ್ ಎಂಟ–ರ ಅವಕಾಶ ಕಳೆದುಕೊಂಡರೂ ಎದುರಾಳಿ ತಂಡಕ್ಕೆ ಮಗ್ಗುಲ ಮುಳ್ಳಾಗಬಹುದು. ಒಂದು ದಿನ ಹಿಂದೆಯಷ್ಟೇ ಪ್ರಬಲ ದಕ್ಷಿಣ ಆಫ್ರಿಕಾ, ಈ ತಂಡದ ವಿರುದ್ಧ ಗೆಲ್ಲಲು ಹರಸಾಹಸ ಪಡಬೇಕಾಯಿತು. ದಕ್ಷಿಣ ಆಫ್ರಿಕಾ ಈಗಾಗಲೇ ಗುಂಪಿನಿಂದ ಸೂಪರ್ ಎಂಟರ ಹಂತ ತಲುಪಿದೆ. ಒಂದೊಮ್ಮೆ ಬಾಂಗ್ಲಾದೇಶ ದೊಡ್ಡ ಅಂತರದಿಂದ ನೇಪಾಳಕ್ಕೆ ಸೋತಲ್ಲಿ, ನೆದರ್ಲೆಂಡ್ಸ್, ರೇಸ್‌ನಿಂದ ಹೊರಬಿದ್ದಿರುವ ಶ್ರೀಲಂಕಾ ವಿರುದ್ಧ ಸುಲಭ ಗೆಲುವು ಪಡೆದಲ್ಲಿ ಆಗ ಲೆಕ್ಕಾಚಾರಗಳು ಬದಲಾಗಬಹುದು. ಆ ಸಾಧ್ಯತೆ ಕಡಿಮೆಯಾದರೂ ಈ ಟೂರ್ನಿಯಲ್ಲಿ ಕೆಲವು ಅನಿರೀಕ್ಷಿತಗಳು ಘಟಿಸಿರುವುದನ್ನು ಮರೆಯುವಂತಿಲ್ಲ.

**ಪಂದ್ಯ ಆರಂಭ:** ಬೆಳಿಗ್ಗೆ 5.00 ನೇಪಾಳದ ಆಸಿಫ್ ಶೇಖ್ ಎಪಿ/ ಪಿಟಿಐ ಚಿತ್ರ ನೇಪಾಳದ ಆಸಿಫ್ ಶೇಖ್ ಎಪಿ/ ಪಿಟಿಐ ಚಿತ್ರ ಲಂಕಾಕ್ಕೆ ಗೆಲುವಿನೊಡನೆ ಲೀಗ್ ಮುಗಿಸುವ ಗುರಿ 'ಡಿ' ಗುಂಪಿನಲ್ಲಿ ಕೊನೆಯ ಸ್ಥಾನದಲ್ಲಿರುವ ಶ್ರೀಲಂಕಾ ತಂಡ ಸೋಮವಾರ ನಡೆಯುವ ಇನ್ನೊಂದು ಪಂದ್ಯದಲ್ಲಿ ಬಿರುಸಿನ ಆಟವಾಡಬಲ್ಲ ನೆದರ್ಲೆಂಡ್ಸ್ ತಂಡವನ್ನು ಎದುರಿಸಲಿದೆ. 2014ರ ಚಾಂಪಿಯನ್ ಶ್ರೀಲಂಕಾ ತಂಡ ಈಗಾಗಲೇ ಸೂಪರ್ ಎಂಟರ ಅವಕಾಶ ಕಳೆದುಕೊಂಡರೂ ಗೆಲುವಿನೊಡನೆ ಲೀಗ್ ಮುಗಿಸಿ ನಿಟ್ಟುಸಿರುಬಿಡುವ ಗುರಿಹೊಂದಿದೆ. ಲಂಕಾ ತಂಡದ ಪ್ರದರ್ಶನ ಈ ಸಲ ಸಪ್ಪೆಯಾಗಿದೆ. ಸ್ಕಾಟ್ ಎಡ್ವರ್ಡ್ಸ್ ನೇತೃತ್ವದ ಡಚ್ಚರ ಪಡೆ ಸ್ಫೂರ್ತಿಯುತ ಪ್ರದರ್ಶನ ನೀಡುವ ಸಾಮರ್ಥ್ಯ ಹೊಂದಿದೆ.

## ನೇಪಾಳ ವಿರುದ್ಧ ಗೆದ್ದು ಸೂಪರ್ 8ಕ್ಕೆ ಲಗ್ಗೆ ಇಟ್ಟ ಬಾಂಗ್ಲಾದೇಶ

ಕಿಂಗ್‌ಸ್ಟೌನ್(ಸೇಂಟ್ ವಿನ್ಸೆಂಟ್): ಯುವ ವೇಗದ ಬೌಲರ್ ತಾಂಜಿಮ್ ಹಸನ್ ಸಾಕಿಬ್ ಅವರ ಮಾರಕ ಬೌಲಿಂಗ್ ನೆರವಿನಿಂದ ನೇಪಾಳವನ್ನು 21 ರನ್‌ಗಳಿಂದ ಮಣಿಸಿದ ಬಾಂಗ್ಲಾದೇಶ ಟಿ:20 ಕ್ರಿ–ಕೆಟ್ ವಿಶ್ವಕಪ್‌ನಲ್ಲಿ ಡಿಗುಂಪಿನಿಂದ ಸೂಪರ್ 8 ಹಂತಕ್ಕೆ ಅಡಿ ಇಟ್ಟಿದೆ. 4 ಓವರ್‌ಗಳಲ್ಲಿ ತಾಂಜಿಮ್ 21 ಎಸೆತಗಳಲ್ಲಿ ಯಾವುದೇ ರನ್ ನೀಡಿಲ್ಲ. 7 ರನ್‌ಗೆ 4 ವಿಕೆಟ್ ಉರುಳಿಸಿದ ಅವರು ಜೀವನಶ್ರೇಷ್ಠ ಬೌಲಿಂಗ್ ಪ್ರದರ್ಶಿಸಿದರು. ಹಿಂದಿನ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾಗೆ ಭಯ ಹುಟ್ಟಿಸಿದ್ದ ನೇಪಾಳದ ಬೌಲರ್‌ಗಳು ಬಾಂಗ್ಲಾವನ್ನು 106 ರನ್‌ಗೆ ಕಟ್ಟಿ ಹಾಕಿದರು. ಸಾಧಾರಣ ಗುರಿ ಬೆನ್ನತ್ತಿದ ಉತ್ಸಾಹಿ ನೇಪಾಳ ತಂಡವನ್ನು ಮಣಿಸಲು ಬಾಂಗ್ಲಾದ ಬೌಲರ್‌ಗಳು ತಮ್ಮ ಇಡೀ ಅನುಭವವನ್ನು ಬಳಸಬೇಕಾಯಿತು. ತಾಂಜಿಮ್ ಜೊತೆ ಶಕೀಬ್ ಅಲ್ ಹಸನ್(9/2), ಮುಸ್ತಫಿಜೂರ್ ರೆಹಮಾನ್(7/3) ಉತ್ತಮ ಬೌಲಿಂಗ್ ಸಂಘಟಿಸುವ ಮೂಲಕ ನೇಪಾಳವನ್ನು 19.2 ಓವರ್‌ಗಳಲ್ಲಿ 85 ರನ್‌ಗೆ ಆಲೌಟ್ ಮಾಡಿದರು. ಒಂದು ಹಂತದಲ್ಲಿ 78 ರನ್‌ಗಳಿಗೆ 5 ವಿಕೆಟ್ ಕಳೆದುಕೊಂಡಿದ್ದ ನೇಪಾಳ, 7 ರನ್ ಗಳಿಸುವಷ್ಟರಲ್ಲಿ ಉಳಿದ 5 ವಿಕೆಟ್ ಕೈಚೆಲ್ಲಿತು. ಇದೇ ಮೊದಲ ಬಾರಿಗೆ ಟಿ.20 ವಿಶ್ವಕಪ್‌ನಲ್ಲಿ ಬಾಂಗ್ಲಾದೇಶ ತಂಡ ಮೂರು ಗೆಲುವು ದಾಖಲಿಸಿದೆ.




**ಸಂಕ್ಷಿಪ್ತ ಸ್ಕೋರ್:** ಬಾಂಗ್ಲಾದೇಶ 19.3 ಓವರ್‌ಗಳಲ್ಲಿ 106 (ಶಕೀಬ್ ಅಲ್ ಹಸನ್ 17, ಸೋಂಪಾಲ್ ಕಾಮಿ 2/10). ನೇಪಾಳ 19.2 ಓವರ್‌ಗಳಲ್ಲಿ 85ಕ್ಕೆ ಆಲೌಟ್ (ತಾಂಜಿಜಿಮ್ ಹಸನ್ ಸಾಕಿಬ್ 4/7, ಶಾಕಿಬ್ ಅಲ್ ಹಸನ್ 2/9, ಮುಸ್ತಾಫಿಜೂರ್ ರಹಮಾನ್ 3/7).

# ನೆದರ್‌ಲ್ಯಾಂಡ್ಸ್ ವಿರುದ್ಧ 83 ರನ್‌ಗಳ ಗೆಲುವು ದಾಖಲಿಸಿದ ಶ್ರೀಲಂಕಾ

ಸೇಂಟ್ ಲೂಸಿಯಾ: ಟಿ20 ವಿಶ್ವಕಪ್ ಟೂರ್ನಿಯ ಡಿ ಗುಂಪಿನ ಅಂತಿಮ ಲೀಗ್ ಪಂದ್ಯದಲ್ಲಿ ಶ್ರೀಲಂಕಾ ತಂಡ ನೆದರ್‌ಲ್ಯಾಂಡ್ಸ್ ತಂಡವನ್ನು 83 ರನ್‌ಗಳಿಂದ ಮಣಿಸಿದೆ.

ಶ್ರೀಲಂಕಾ ನೀಡಿದ್ದ 202 ರನ್‌ಗಳ ಗುರಿ ಬೆನ್ನತ್ತಿದ ನೆದರ್‌ಲ್ಯಾಂಡ್ಸ್ 118 ರನ್‌ಗಳಿಗೆ ಆಲೌಟ್ ಆಗುವ ಮೂಲಕ ಸೋಲೊಪ್ಪಿಕೊಂಡಿತು. ಬೌಲಿಂಗ್, ಬ್ಯಾಟಿಂಗ್ ಮತ್ತು ಫೀಲ್ಡಿಂಗ್‌ಗಳಲ್ಲಿ ಮಿಚಿದ ಲಂಕನ್ನರು ಅತ್ಯುತ್ತಮ ಪ್ರದರ್ಶನ ನೀಡಿ ಗೆಲುವು ದಾಖಲಿಸಿದರು. ಆದರೆ, ಈ ಗೆಲುವಿನ ಬಳಿಕವೂ ಲಂಕಾ ಸೂಪರ್8ಗೆ ಏರುವ ಅವಕಾಶವಿಲ್ಲ.





ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ಪರ ಕುಶಲ ಮೆಂಡಿಸ್ 46, ಧನಂಜಯ ಡಿ ಸಿಲ್ವಾ 34, ಚರಿತ್ ಅಸಲಂಕಾ 46, ಆಂಜೆಲೊ ಮ್ಯಾಥ್ಯೂಸ್ 30 ಮತ್ತು ನಾಯಕ ವನಿಂದು ಹಸರಂಗಾ 20 ರನ್ ಸಿಡಿಸಿದರು. ಬೃಹತ್ ಗುರಿ ಬೆನ್ನತ್ತಿದ ನೆಂದರ್‌ಲ್ಯಾಂಡ್ಸ್ ಪರ ಮೈಕಲ್ ಲ್ಯಾವಿಟ್ ಮತ್ತು ಸ್ಕಾಟ್ ಎಡ್ವರ್ಡ್ ತಲಾ 31 ರನ್ ಸಿಡಿಸಿದರಾದರೂ ಉಳಿದ ಆಟಗಾರರಿಂದ ಬೆಂಬಲ ಸಿಗಲಿಲ್ಲ. ಹೀಗಾಗಿ, 16.4 ಓವರ್‌ಗಳಲ್ಲೇ ತಂಡ 118 ರನ್‌ಗೆ ಆಲೌಟ್ ಆಯಿತು.




ವೇಗಿ ಶಹೀನ್ ಶಾ ಅಫ್ರಿದಿ, ಸ್ಪಿನ್ನರ್ ಇಮಾದ್ ವಾಸೀಂ ಅವರ ಅಮೋಘ ಬೌಲಿಂಗ್ ಹಾಗೂ ನಾಯಕ ಬಾಬರ್ ಆಜಂ (ಅಜೇಯ 32, 34ಎ) ಅವರ ಜವಾಬ್ದಾರಿಯುತ ಬ್ಯಾಟಿಂಗ್ ನೆರವಿನಿಂದ ಪಾಕಿಸ್ತಾನ ತಂಡ ಭಾನುವಾರ ಐರ್ಲೆಂಡ್ ಎದುರು ಮೂರು ವಿಕೆಟ್‌ಗಳ ಗೆಲುವು ದಾಖಲಿಸಿತು. ಪಾಕಿಸ್ತಾನ 4 ಪಂದ್ಯಗಳಿಂದ 4 ಅಂಕ ಗಳಿಸಿ ಲೀಗ್ ಹಂತದ ಅಭಿಯಾನ ಪೂರ್ಣಗೊಳಿಸಿತು. ಭಾರತ ಮತ್ತು ಅಮೆರಿಕ ತಂಡಗಳು ಈಗಾಗಲೇ ಗುಂಪಿನಿಂದ ಸೂಪರ್ ಎಂಟರ ಹಂತ ಪ್ರವೇಶಿಸಿವೆ. ಟಿ20 ವಿಶ್ವಕಪ್ ಟೂರ್ನಿಯ ಎ ಗುಂಪಿನ ಪಂದ್ಯದಲ್ಲಿ ಟಾಸ್ ಗೆದ್ದ ಪಾಕಿಸ್ತಾನ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಅಫ್ರಿದಿ (22ಕ್ಕೆ3) ಮತ್ತು ವಾಸೀಂ (8ಕ್ಕೆ3) ಅವರ ಪರಿಣಾಮಕಾರಿ ದಾಳಿಯ ಮುಂದೆ ಐರ್ಲೆಂಡ್ ತಂಡವು 20 ಓವರ್‌ಗಳಲ್ಲಿ 9 ವಿಕೆಟ್‌ಗಳಿಗೆ 106 ರನ್ ಗಳಿಸಿತು. ಈ ಅಲ್ಪ ಮೊತ್ತದ ಗುರಿ ಬೆನ್ನಟ್ಟಿದ ಪಾಕ್ ತಂಡ–ಕ್ಕೆ ಬ್ಯಾರಿ ಮೆಕಾರ್ಥಿ (15ಕ್ಕೆ3) ಹಾಗೂ ಕರ್ಟಿಸ್ ಕ್ಯಾಂಪರ್ (24ಕ್ಕೆ2) ಆಘಾತ ನೀಡಿದರು. ಆದರೆ ಬಾಬರ್ ಅವರ ಸಂಯಮದ ಆಟದಿಂದ 18.5 ಓವರ್‌ಗಳಲ್ಲಿ 111 ರನ್ ಗಳಿಸಿ ಜಯಭೇರಿ ಬಾರಿಸಿತು. ಈ ಪಂದ್ಯದಲ್ಲೂ ಪಾಕಿಸ್ತಾನದ ಮಧ್ಯಮ ಕ್ರಮಾಂಕದ ಆಟಗಾರರು ವಿಫಲರಾದರು. ಫಖರ್ ಜಮಾನ್ (5), ಉಸ್ಮಾನ್ ಖಾನ್ (2), ಶದಾಬ್ ಖಾನ್ (0), ಇಮಾದ್ ವಾಸೀಂ (4), ಅಬ್ಬಾಸ್ ಅಫ್ರಿದಿ (17) ಅವರು ನಿರಾಸೆ ಮೂಡಿಸಿದರು. ಒಂದು ಹಂತದಲ್ಲಿ 62 ರನ್‌ಗೆ 6 ವಿಕೆಟ್‌ಗೆ ಕಳೆದುಕೊಂಡು ಸಂಕಷ್ಟದಲ್ಲಿತ್ತು. ಒಂದೆಡೆ ವಿಕೆಟ್‌ಗಳು ನಿಯಮಿತವಾಗಿ ಪತನವಾಗುತ್ತಿದ್ದರೆ ಬಾಬರ್ ಅವರು ದಿಟ್ಟತನದಿಂದ ಆಟವಾಡಿ ತಂಡವನ್ನು ಗೆಲುವಿನ ದಡ ಸೇರಿಸಿದರು. ಶಹೀನ್ ಅಫ್ರಿದಿ ಅವರು ಐದು ಎಸೆತಗಳಲ್ಲಿ 13 ರನ್ ಗಳಿಸಿ ಅಜೇಯರಾದರು. ಎರಡು ಸಿಕ್ಸರ್ ಸಹ ಬಾರಿಸಿದರು. ಇದಕ್ಕೂ ಮುನ್ನ ಗರೆತ್ ಡೆಲನಿ (31; 19ಎ) ಅವರು ಕೊನೆಯ ಹಂತದಲ್ಲಿ ಮಿಂಚಿದ್ದರಿಂದ ಐರ್ಲೆಂಡ್ ತಂಡವು 100ರ ಗಡಿ ದಾಟಿತು. ಗರೆತ್ ಅವರು 3 ಸಿಕ್ಸರ್ ಬಾರಿಸಿದರು. ಅಫ್ರಿದಿ ಹಾಕಿದ ಇನಿಂಗ್ಸ್‌ನ ಮೊದಲ ಓವರ್‌ನಲ್ಲಿ ಆಂಡ್ರ್ಯೂ ಬಲ್ಬಿರ್ನಿ ಮತ್ತು ಲಾರ್ಕನ್ ಟಕ್ಕರ್ ವಿಕೆಟ್‌ಗಳನ್ನು ಪತನವಾದವು. ಇನ್ನೊಂದೆಡೆಯಿಂದ ಆಮಿರ್ ಮತ್ತು ಹ್ಯಾರಿಸ್ ರವೂಫ್ ಕೂಡ ಉತ್ತಮ ಬೌಲಿಂಗ್ ಮಾಡಿದರು. ಇಮದ್ ವಾಸೀಂ ಅವರು ಮಧ್ಯಮ ಕ್ರಮಾಂಕದ ಬ್ಯಾಟರ್‌ಗಳ ವಿಕೆಟ್ ಗಳಿಸಿ ಐರ್ಲೆಂಡ್ ತಂಡವು ಹೆಚ್ಚು ಮೊತ್ತ ಗಳಿಸದಂತೆ ನೋಡಿಕೊಂಡರು.

**ಸಂಕ್ಷಿಪ್ತ ಸ್ಕೋರು: ಐರ್ಲೆಂಡ್:** 20 ಓವರ್‌ಗಳಲ್ಲಿ 9 ವಿಕೆಟ್‌ಗಳಿಗೆ 106 (ಗೆ–ರೆತ್ ಡೆಲನಿ 31, ಮಾರ್ಕ್ ಅಡೇರ್ 15, ಜೋಶುವಾ ಲಿಟಲ್ ಔಟಾಗದೆ 22, ಶಹೀನ್ ಅಫ್ರಿದಿ 22ಕ್ಕೆ3, ಮೊಹಮ್ಮದ್ ಅಮಿರ್ 11ಕ್ಕೆ2, ಇಮದ್ ವಾಸೀಂ 8ಕ್ಕೆ3) **ಪಾಕಿಸ್ತಾನ:** 18.5 ಓವರ್‌ಗಳಲ್ಲಿ 7 ವಿಕೆಟ್‌ಗೆ 111 (ಮೊಹಮದ್ ರಿಜ್ವಾನ್ 17, ಬಾಬರ್ ಆಜಂ ಔಟಾಗದೆ 32, ಶಹೀನ್ ಅಫ್ರಿದಿ ಔಟಾಗದೆ 13, ಬ್ಯಾರಿ ಮೆಕಾರ್ಥಿ 15ಕ್ಕೆ3, ಕರ್ಟಿಸ್ ಕ್ಯಾಂಪರ್ 24ಕ್ಕೆ2. ಪಂದ್ಯ ಶ್ರೇಷ್ಠ: ಶಹೀನ್ ಅಫ್ರಿದಿ.

# ಅಲ್ಲು ಅರ್ಜುನ್ ಅಭಿಮಾನಿಗಳಿಗೆ ತುಸು ಬೇಸರ: ಪುಷ್ಪ -2 ಸಿನಿಮಾ ರಿಲೀಸ್ ಡೇಟ್ ಮುಂದಕ್ಕೆ!



ಬೆಂಗಳೂರು: ಟಾಲಿವುಡ್ ನಟ ಅಲ್ಲು ಅರ್ಜುನ್ ಅಭಿನಯದ ಬಹುನಿರೀಕ್ಷಿತ ಸಿನಿಮಾ 'ಪುಷ್ಪ 2' ಬಿಡುಗಡೆ ದಿನಾಂಕ ಮುಂದಕ್ಕೆ ಹೋಗಿದೆ. 2024 ರ ಡಿಸೆಂಬರ್ 6ರಂದು ಎಲ್ಲಾ ಚಿತ್ರಮಂದಿರಗಳಲ್ಲಿ ಸಿನಿಮಾ ಬಿಡುಗಡೆಯಾಗಲಿದೆ ಎಂದು ನಿರ್ಮಾಪಕರು ತಿಳಿಸಿದ್ದಾರೆ. ಪುಷ್ಪ–2 ಸಿನಿಮಾದ ಬಿಡುಗಡೆಯನ್ನು ಐದು ತಿಂಗಳು ಮುಂದೂಡಲಾಗಿದೆ. ಪುಷ್ಪ 2 ಸಿನಿಮಾವನ್ನು ಆಗಸ್ಟ್ 5ರ ಬದಲಾಗಿ ಇದೇ ವರ್ಷದ ಡಿಸೆಂಬರ್ 6ರಂದು ಬಿಡುಗಡೆ ಮಾಡಲು ಚಿತ್ರತಂಡವು ತೀರ್ಮಾನಿಸಿದೆ. ಈ ಕುರಿತು ಅಲ್ಲು ಅರ್ಜುನ್ ಅವರೇ ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಸ್ಪಷ್ಟನೆ ನೀಡಿದ್ದಾರೆ. ಇದ–ರಿಂದಾಗಿ ಅಲ್ಲು ಅರ್ಜುನ್ ಅಭಿಮಾನಿಗಳಿಗೆ ತುಸು ಬೇಸರ ಉಂಟಾದಂತಾಗಿದೆ. ಈ ಕುರಿತು ಸಾಮಾಜಿಕ ಜಾಲತಾಣ ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಮಾಡಿರುವ ಮೈತ್ರಿ ಮೂವೀಸ್ ನಿರ್ಮಾಣ ಸಂಸ್ಥೆ, 'ನಾವು ನಿಮಗೆ (ಪ್ರೇಕ್ಷಕರಿಗೆ) ಅತ್ಯುತ್ತಮವಾದದ್ದನ್ನು ನೀಡಲು ಉದ್ದೇಶಿಸಿದ್ದೇವೆ. ದೊಡ್ಡ ಪರದೆ–ಯ ಮೇಲೆ ಸ್ಮರಣೀಯ ಅನುಭವವನ್ನು ಪಡೆಯಲು ಕಾಯುವಿಕೆ ಹೆಚ್ಚಾಗುತ್ತಿದೆ. ಪುಷ್ಪದಿ ರೂಲ್ 2024ರ ಡಿಸೆಂಬರ್ 6ರಂದು ವಿಶ್ವದಾದ್ಯಂತ ತೆರೆ ಕಾಣಲಿದೆ' ಎಂದು ತಿಳಿಸಿದೆ. ಅಲ್ಲು ಅರ್ಜುನ್ ವಿಧಾನಸಭೆ ಚುನಾವಣೆ ವೇಳೆ ನಂದಿಯಾಲ ವಿಧಾನಸಭೆ ಕ್ಷೇತ್ರದಲ್ಲಿ ವೈಎಸ್‌ಆರ್‌ಸಿಪಿ ಅಭ್ಯರ್ಥಿ ಪರ ಪ್ರಚಾರ ಮಾಡಿದ್ದರು. ಇದರಿಂದಾಗಿ ಮೆಗಾ ಸ್ಟಾರ್ ಕುಟುಂಬದ ಪವನ್ ಕಲ್ಯಾಣ್ ಅವರ ಅಭಿಮಾನಿಗಳ ಆಕ್ರೋಶಕ್ಕೆ ಅಲ್ಲು ಅರ್ಜುನ್ ಗುರಿಯಾಗಿದ್ದಾರೆ. ಅಲ್ಲದೆ, ಪುಷ್ಪ 2 ಸಿನಿಮಾವನ್ನು ನಾವು ವೀಕ್ಷಿಸುವುದಿಲ್ಲ, ಬಾಯ್ಕಾಟ್ ಮಾಡುತ್ತೇವೆ ಎಂಬುದಾಗಿ ಪವರ್ ಸ್ಟಾರ್ ಅಭಿಮಾನಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಾಗಾಗಿಯೇ, ಸಿನಿಮಾ ಬಿಡುಗಡೆ ದಿನಾಂಕವನ್ನು ಮುಂದೂಡಲಾಗಿದೆ ಎಂದು ತಿಳಿದುಬಂದಿದೆ. ಮತ್ತೊಂದಿಷ್ಟು ಮೂಲಗಳ ಪ್ರಕಾರ, ನಿರ್ದೇಶಕ ಸುಕುಮಾರ್ ಇನ್ನೂ ಚಿತ್ರದ ಶೂಟಿಂಗ್ ಮತ್ತು ಪೋಸ್ಟ್ ಪ್ರೊಡಕ್ಷನ್ ಹಂತದ ಕೆಲಸಗಳಲ್ಲಿ ನಿರತರಾಗಿರುವುದರಿಂದ ಸಿನಿಮಾ ಬಿಡುಗಡೆ–ಯ ದಿನಾಂಕವನ್ನು ಮುಂದೂಡಲಾಗಿದೆ ಎಂದು ಹೇಳಲಾಗುತ್ತಿದೆ. ಇನ್ನೂ ಒಂದು ತಿಂಗಳ ಶೂಟಿಂಗ್ ಬಾಕಿಯಿದ್ದು ಜುಲೈ ವೇಳೆಗೆ ಚಿತ್ರೀಕರಣ ಪೂರ್ಣಗೊಳಿಸುವ ಗುರಿಯನ್ನು ಸುಕುಮಾರ್ ಹೊಂದಿದ್ದಾರೆ ಎನ್ನಲಾಗಿದೆ.

# 'ರಾಮರಸ' ಮೂಲಕ ಬೆಳ್ಳಿತೆರೆಗೆ ಬಿಗ್ ಬಾಸ್ ಖ್ಯಾತಿಯ ಕಾರ್ತಿಕ್ ಮಹೇಶ್



ಬೆಂಗಳೂರು: ಕನ್ನಡದ ಬಿಗ್ ರಿಯಾಲಿಟಿ ಶೋ ಬಿಗ್‌ಬಾಸ್ ಸೀಸನ್ 10ರ ವಿನ್ನರ್ ಕಾರ್ತಿಕ್ ಮಹೇಶ್ ಮತ್ತೆ ಬೆಳ್ಳಿ ಪರದೆ ಮೇಲೆ ಮಿಂಚಲು ರೆಡಿಯಾಗಿದ್ದಾರೆ. ಈ ಹಿಂದೆ ಸಾಗರ್ ಪುರಾಣಿಕ್ ಅವರ ಡೊಳ್ಳು ಚಿತ್ರದ ಮೂಲಕ ಚಿತ್ರರಂಗಕ್ಕೆ ಕಾಲಿಟ್ಟಿದ್ದ ಕಾರ್ತಿಕ್ ಮಹೇಶ್ ಇದೀಗ 'ರಾಮರಸ' ಚಿತ್ರದ ಮೂಲಕ ಮತ್ತೆ ತಮ್ಮ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ. ಕಾರ್ತಿಕ್ ರ ಮೊದಲ ಚಿತ್ರ ಪ್ರೇಕ್ಷಕರ ಮೆಚ್ಚುಗೆ ಗಳಿಸಿದ್ದು ಮಾತ್ರವಲ್ಲದೇ ರಾಷ್ಟ್ರ ಪ್ರಶಸ್ತಿಯನ್ನು ಗೆದ್ದುಕೊಂಡಿತ್ತು. ಇದೀಗ ರಾಮರಸ ಚಿತ್ರದ ಮೂಲಕ ಮತ್ತೆ ಬೆಳ್ಳಿ ಪರದೆ ಮೇಲೆ ಮಿಂಚಲು ಸಿದ್ಧರಾಗಿದ್ದಾರೆ. ಕಾರ್ತಿಕ್ ಮಹೇಶ್ ನಟನೆಯ 'ರಾಮರಸ' ಸಿನಿಮಾದ ಸುದ್ದಿಗೋಷ್ಠಿಗೆ ನಟ ಕಿಚ್ಚ ಸುದೀಪ್ ಅವರು ಅತಿಥಿಯಾಗಿ ಬಂದಿದ್ದರು. ನೂತನ 'ರಾಮರಸ' ಸಿನಿಮಾದ ಹೀರೋ ಆಗಿ ಕಾರ್ತಿಕ್ ಮಹೇಶ್ ಅವರನ್ನು ಕಿಚ್ಚ ಸುದೀಪ್ ಲಾಂಚ್ ಮಾಡಿದ್ದು, ಕಿಚ್ಚ ಸುದೀಪ್ ಅವರಿಂದ ಹೀರೋ ಆಗಿ ಲಾಂಚ್ ಆದ ಕಾರ್ತಿಕ್ ಮಹೇಶ್ ಅವರು ಫುಲ್ ಖುಷ್ ಆಗಿದ್ದಾರೆ. ಈ ರಾಮರಸ ಚಿತ್ರವನ್ನು ಜಿ–ಸಿನಿಮಾಸ್ ಬ್ಯಾನರ್ ಅಡಿಯಲ್ಲಿ ಗುರು ದೇಶಪಾಂಡೆ ನಿರ್ಮಿಸಿದ್ದಾರೆ. ಚಿತ್ರವನ್ನು ಗಿರಿರಾಜ್ ಬಿಎಂ ನಿರ್ದೇಶಿಸಿದ್ದು, ಚಿತ್ರ ಸಾಕಷ್ಟು ಕುತೂಹಲ ಕೆರಳಿಸಿದೆ ಕಾರ್ಯಕ್ರಮದಲ್ಲಿ ಮಾತನಾಡಿದ ಕಾರ್ತಿಕ್, "ಬಿಗ್ ಬಾಸ್‌ನಲ್ಲಿ ಗೆಲ್ಲುವ ಕ್ಷಣದಲ್ಲಿ ಸುದೀಪ್ ಸರ್ ನನ್ನ ಕೈ ಹಿಡಿದಿದ್ದರು.. ಅಂದಿನಿಂದ ನಿಸ್ಸಂದೇಹವಾಗಿ ಅವರ ಬೆಂಬಲ ಮುಂದುವರಿಯುತ್ತಿದೆ ಎಂದರು. ಅಂತೆಯೇ ಡೊಳ್ಳು ಚಿತ್ರದ ಮೂಲಕ ನಾನು ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ್ದರೂ, ರಾಮರಸ ನನ್ನ ಮೊದಲ ಕಮರ್ಷಿಯಲ್ ಚಿತ್ರವಾಗಿದೆ ಎಂದರು. ಬಿಗ್ ಬಾಸ್ ಮೂಲಕ ಚಿತ್ರೋದ್ಯಮದ ಬಗ್ಗೆ ಸಾಕಷ್ಟು ಕಲಿತಿದ್ದೇನೆ. ನಾನು ಹೆಚ್ಚು ಜನರನ್ನು ಮತ್ತು ಚಲನಚಿತ್ರ ಬಂಧುಬಳಗವನ್ನು ತಲುಪಿದ್ದೇನೆ, ಹಾಗಾಗಿ ಸಾಕಷ್ಟು ಅವಕಾಶಗಳು ನನ್ನನ್ನು ಸಂಪರ್ಕಿಸುತ್ತಿವೆ ಎಂದರು. ರಾಮರಸ ಚಿತ್ರಕ್ಕೆ ಸಹಿ ಹಾಕುವ ಮುನ್ನ ನಾನು ಸುಮಾರು 20ಕ್ಕೂ ಹೆಚ್ಚು ಸ್ಕ್ರಿಪ್ಟ್‌ಗಳನ್ನು ಕೇಳಿದ್ದೆ. ನನ್ನ ಮೊದಲ ಚಿತ್ರ ಡೊಳ್ಳುನಲ್ಲಿ ಹಳ್ಳಿಯ ಯುವಕನಾಗಿ ಕಾಣಿಸಿಕೊಂಡಿದ್ದೆ. ಇದೀಗ ರಾಮರಸ ಚಿತ್ರದಲ್ಲಿ ವಿಭಿನ್ನ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆ. ಇದು ಪರಿಕಲ್ಪನೆ ಆಧಾರಿತ ವಾಣಿಜ್ಯ ಮನರಂಜನೆಯಾಗಿದೆ ಎಂದು ಕಾರ್ತಿಕ್ ಹೇಳಿದರು. ನನ್ನ ಸಿನಿ ವೃತ್ತಿ ಜೀವನದ ಪ್ರತೀಯೊಂದು ಹೆಜ್ಜೆಗಳೂ ಕೂಡ ನನಗೆ ಪ್ರಮುಖ ಘಟ್ಟಗಳಾಗಿವೆ. ಆರಂಭದಲ್ಲಿ ನನಗೆ ಐಟಿ ಉದ್ಯೋಗ ಲಭಿಸಿತ್ತು. ಆದರೆ ಕೆಲಸಕ್ಕೆ ಸೇರಿದ ಮೊದಲ ದಿನವೇ ನನಗೆ ನನ್ನದು 9 –5 ಉದ್ಯೋಗ ಮಾಡುವ ಪ್ರವೃತ್ತಿಯಲ್ಲ ಎಂದು.. ಈ ಬಗ್ಗೆ ನನ್ನ ತಂದೆ ಬಳಿ ಹೇಳಿಕೊಂಡೆ. ನನ್ನನ್ನು ಅರ್ಥ ಮಾಡಿಕೊಂಡ ಅವರು ನನಗೆ ಬೆಂಬಲಿಸಿದರು. ಅಂದಿನಿಂದ ನಾನು ಸಾಕಷ್ಟು ಆಡಿಷನ್ ಗಳಲ್ಲಿ ಪಾಲ್ಗೊಂಡಿದ್ದೇನೆ. ಸಾಮಾಜಿಕ ಜಾಲತಾಣಗಳಲ್ಲಿ ಆಡಿಷನ್ ನೀಡಿದ್ದೇನೆ. ಇಂದು ಇಲ್ಲಿ ಬಂದು ನಿಂತಿದ್ದೇನೆ. ಈ ಅನುಭವ ತುಂಬಾ ವಿಶಿಷ್ಟವಾದದ್ದು ಎಂದು ಕಾರ್ತಿಕ್ ಮಹೇಶ್ ಹೇಳಿದ್ದಾರೆ. ಕಾರ್ತಿಕ್ ಮಹೇಶ್ ಜೊತೆಗೆ, ಚಿತ್ರ ತಯಾರಕರು ಜಿ–ಅಕಾಡೆಮಿ ಅಡಿಯಲ್ಲಿ ತರಬೇತಿ ಪಡೆದ 16 ಹೊಸ ಮುಖಗಳನ್ನು ಪರಿಚಯಿಸುತ್ತಿದ್ದಾರೆ. ರಾಮರಸ ಚಿತ್ರದಲ್ಲಿ ಬಾಲಾಜಿ ಮನೋಹರ್ ಸಹ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ರಾಮರಸ ಮಾತ್ರವಲ್ಲದೇ ಕಾರ್ತಿಕ್ ಕೈಯಲ್ಲಿ ಮತ್ತೊಂದು ಚಿತ್ರ ಕೂಡ ಇದ್ದು, ಇದು ಪ್ರೀತಿ ಕಥೆಯಾಧಾರಿತವಾಗಿದೆ ಎಂದು ಕಾರ್ತಿಕ್ ಹೇಳಿದ್ದಾರೆ.

# AI ಬಗ್ಗೆ ಅಭಿಮಾನಿಗಳು ಕಳವಳ!



ನವದೆಹಲಿ: ದಿನದಿಂದ ದಿನಕ್ಕೆ ಡೀಪ್‌ಫೇಕ್ ವಿಡಿಯೋಗಳ ಹಾವಳಿ ಮಿತಿಮೀರುತ್ತಿದ್ದು, ಬಾಲಿವುಡ್ ನಟಿ ಆಲಿಯಾ ಭಟ್ ಮತ್ತೊಮ್ಮೆ ಡೀಪ್‌ಫೇಕ್ ವಿಡಿಯೋ ಹಾವಳಿಗೆ ಸಿಲುಕಿದ್ದಾರೆ. ಆಲಿಯಾ ಭಟ್ ಅವರ ಹೊಸ ಡೀಪ್‌ಫೇಕ್ ವಿಡಿಯೋ ಇದೀಗ ವೈರಲ್ ಆಗಿದ್ದು, ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡ ವಿಡಿಯೋದಲ್ಲಿ 'ನನ್ನೊಂದಿಗೆ ಸಿದ್ಧರಾಗಿ' ಟ್ರೆಂಡ್‌ನಲ್ಲಿ ಭಾಗವಹಿಸು ವುದನ್ನು ತೋರಿಸುತ್ತದೆ. ಕಪ್ಪು ಕುರ್ತಾದಲ್ಲಿ ತಯಾರಾ ಗುತ್ತಿರುವುದನ್ನು ಮತು ಮೇಕಪ್ ಹಾಕಿಕೊಳ್ಳುತ್ತಿರುವುದನ್ನು ವಿಡಿಯೋ ತೋರಿಸುತ್ತದೆ. ಆಲಿಯಾ ಅವರ ಡೀಪ್‌ಫೇಕ್ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿರುವುದು ಇದೇ ಮೊದಲಲ್ಲ. ಈ ಹಿಂದೆ, ನಟಿ ವಮಿಕಾ ಗಬ್ಬಿ ಅವರ ಮುಖದೊಂದಿಗೆ ಆಲಿಯಾ ಭಟ್ ಅವರ ಮುಖವನ್ನು ಜೋಡಿಸಿರುವ ಡೀಪ್‌ಫೇಕ್ ವಿಡಿಯೋ ಕೂಡ ವೈರಲ್ ಆಗಿತ್ತು. ಮತ್ತೊಂದು ಡೀಪ್‌ಫೇಕ್ ವಿಡಿಯೋದಲ್ಲಿ ಆಲಿಯಾ ಭಟ್ ಅವರ ತಿರುಚಿದ ಮುಖವನ್ನು ಹೊಂದಿರುವ ಮಹಿಳೆ ಅಶ್ಲೀಲ ಸನ್ನೆಗಳನ್ನು ಮಾಡುವುದನ್ನು ತೋರಿಸಿದೆ. ಆಲಿಯಾ ಭಟ್ ಅವರ ಡೀಪ್‌ಫೇಕ್ ವೀಡಿಯೊಗೆ ಹಲವಾರು ಇನ್‌ಸ್ಟಾಗ್ರಾಮ್ ಬಳಕೆದಾರರು ಪ್ರತಿಕ್ರಿಯಿಸಿದ್ದು, ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ (ಎಐ) ದುರುಪಯೋಗದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ದಿನದಿಂದ ದಿನಕ್ಕೆ ಅಪಾಯ ಕಾರಿಯಾಗುತ್ತಿದೆ' ಎಂದು ಬಳಕೆದಾರರೊಬ್ಬರು ಹೇಳಿ ದ್ದಾರೆ. ಮತ್ತೊಬ್ಬರು, 'ನಾನು ಈಗ ಗೆ ಹೆದರುತ್ತಿದ್ದೇನೆ' ಎಂದಿ ದ್ದಾರೆ. ರಶ್ಮಿಕಾ ಮಂದಣ್ಣ, ಕಾಜೋಲ್, ಕತ್ರಿನಾ ಕೈಫ್, ಅಮೀರ್ ಖಾನ್, ರಣವೀರ್ ಸಿಂಗ್ ಮತ್ತು ಸಾರಾ ತೆಂಡೂಲ್ಕರ್ ಸೇರಿದಂತೆ ಹಲವಾರು ಸೆಲೆಬ್ರಿಟಿಗಳ ಡೀಪ್‌ಫೇಕ್ ವಿಡಿಯೋಗಳು ಈ ಹಿಂದೆ ಅಂತರ್ಜಾಲದಲ್ಲಿ ಕಾಣಿಸಿಕೊಂಡಿದ್ದವು. ಡೀಪ್ ಫೇಕ್ ವಿಡಿಯೋಗಳನ್ನು ಸೃಷ್ಟಿಸಿ ಹಂಚಿಕೊಂಡರೆ 1 ಲಕ್ಷ ದಂಡ ಮತ್ತು ಮೂರು ವರ್ಷಗಳ ಜೈಲು ಶಿಕ್ಷೆ ವಿಧಿ ಸಲಾಗುತ್ತದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಡೀಪ್‌ಫೇಕ್ ವಿಡಿಯೋಗಳನ್ನು ರಚಿಸಲು ನ ದುರುಪಯೋಗ ಮಾಡಿ ಕೊಳ್ಳಲಾಗುತ್ತಿದೆ. ಇದು ತುಂಬ ಆಘಾತಕಾರಿ ಸಂಗತಿಯಾಗಿದ್ದು, ಕೃತಕ ಬುದ್ಧಿಮತ್ತೆಯ ಈ ಸಮಯ ದಲ್ಲಿ ತಂತ್ರಜ್ಞಾನವನ್ನು ಜವಾಬ್ದಾರಿಯುತವಾಗಿ ಬಳಸುವುದು ಮುಖ್ಯವಾಗಿದೆ ಎಂದು ಅವರು ಎಚ್ಚರಿಸಿದ್ದಾರೆ.

## ಒಂದನೇ ಪುಟದಿಂದ

### ಸುಗಮ ಸಂಗೀತ ಕನ್ನಡದ ಅಸ್ಮಿತೆ: ಕಿಕ್ಕೇರಿ ಕೃಷ್ಣಮೂರ್ತಿ

ಭಾಗವಾಗಿದ್ದಕ್ಕೆ ಹೆಮ್ಮೆ ಇದೆ' ಎಂದು ನುಡಿದರು.

'ಬೆಂಗಳೂರು, ಮೈಸೂರು ದಸರಾ ಕವಿಗೋಷ್ಠಿಯಲ್ಲಿ ಭಾಗವಹಿಸುವ ಅವಕಾಶ ಎಲ್ಲರಿಗೂ ಸಿಗುವುದಿಲ್ಲ. ಅಂತಹ ಕವಿಗಳಿಗೆ 'ಸ್ವರಾಭರಣ'ದಂತಹ ಕಾರ್ಯಕ್ರಮಗಳು ನೆರವಾಗುತ್ತವೆ. ಇಲ್ಲಿ ವಾಚಿಸಿದ ಕವನ, ಗೀತೆಗಳು ಯಾವತ್ತೊ ಒಂದು ದಿನ ರಾಜ್ಯದ ಗಮನ ಸೆಳೆಯುತ್ತವೆ. ಈ ಭರವಸೆ ಕವಿ, ಸಂಗೀತಗಾರರನ್ನು ಜೀವಂತವಾಗಿ ಇಡುತ್ತದೆ. ಇತ್ತೀಚೆಗೆ ದೃಶ್ಯ ಮಾಧ್ಯಮ ಸಮಾಜವನ್ನು ಕಲುಷಿತಗೊಳಿಸುತ್ತಿದೆ. ಐದು ಧಾರಾವಾಹಿ ನೋಡಿದರೆ ಸಾಕು ಕುಟುಂಬ ಹಾಳು ಮಾಡಬಹುದು' ಎಂದು ಬೇಸರ ವ್ಯಕ್ತಪಡಿಸಿದರು.

ಸ್ಥಳೀಯ ಕವಿಗಳು ರಚಿಸಿದ ಕಾವ್ಯಕ್ಕೆ ಸ್ವರ ಸಂಯೋಜನೆ ಮಾಡಿ ಹಾಡಲಾಯಿತು. ಕರ್ನಾಟಕ ಸುಗಮ ಸಂಗೀತ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಪ್ರವೀಣ್, ಖಜಾಂಚಿ ಪ್ರಶಾಂತ ಉಡುಪ, ಮೈಸೂರು ಘಟಕದ ಅಧ್ಯಕ್ಷ ವಿ.ನಾಗರಾಜ್, ಶಿವಮೊಗ್ಗ ಘಟಕದ ಅಧ್ಯಕ್ಷರಾದ ಶಾಂತಾ ಎಸ್.ಶೆಟ್ಟಿ, ಮಂಡ್ಯ ಘಟಕದ ಅಧ್ಯಕ್ಷ ಡೇವಿಡ್ ಪ್ರತಿಭಾಂಜಲಿ, ಅನುಶ್ರೀ ಸಂಗೀತ ಶಾಲೆಯ ಸಂಸ್ಥಾಪಕರಾದ ವೀಣಾ ಸದಾನಂದ ಹೆಗಡೆ, ಸಾಲಿಗ್ರಾಮ ಗಣೇಶ ಶೆಣೈ ಇದ್ದರು.

## ಸಂಪನ್ಮೂಲಕ್ಕೆ 25 ಸಾವಿರ ಆಸ್ತಿ ಬಳಕೆಗೆ ವಿರೋಧ

ಪ್ರಶ್ನಿಸಿದ್ದಾರೆ.

ಪ್ರತ್ಯೇಕ ಧರ್ಮ, ಭಾಷೆ, ಜಾತಿ, ಅಲ್ಪಸಂಖ್ಯಾತರ ಓಲೈಕೆ ಅಂತ ಜನರನ್ನು ದಿಕ್ಕು ತಪ್ಪಿಸಿ ಜೀವನುದ್ದಕ್ಕೂ ಯಾರಿಗೋ ಸಿಕ್ಕ ಜನಾದೇಶವನ್ನು ಕಸಿದುಕೊಂಡು ಅಧಿಕಾರ ಅನುಭವಿಸಿದ್ದೊಂದೇ ನಿಮ್ಮ ಸಾಧನೆ. ಕರ್ನಾಟಕಕ್ಕೆ ತಮ್ಮ ಕೊಡುಗೆ ದೊಡ್ಡ ಶೂನ್ಯ ಎಂದು ಅಶೋಕ್ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

## ಭವಾನಿಗೆ ಹೈಕೋರ್ಟ್ ನಿರೀಕ್ಷಣಾ ಜಾಮೀನು

ಹೊರಿಸಲಾಗುತ್ತಿದೆ ಎಂದು ಭವಾನಿ ರೇವಣ್ಣ ಎಸ್ಐಟಿ ಅಧಿಕಾರಿಗಳ ಮುಂದೆ ಹೇಳಿದ್ದಾರೆ.

ಏನಿದು ಪ್ರಕರಣ:

ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯ ಆರೋಪದ ಪ್ರಕರಣದಲ್ಲಿ ಸಂತ್ರಸ್ತೆಯನ್ನು ಅಪಹರಿಸಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಕೆ.ಆರ್.ನಗರ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಿಸಲಾಗಿದೆ.

ಪ್ರಕರಣದ ಮೊದಲ ಆರೋಪಿ ಎಚ್.ಡಿ.ರೇವಣ್ಣ ಬಂಧನಕ್ಕೊಳಗಾಗಿದ್ದರು.

ನಂತರ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅವರಿಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು. ಪ್ರಕರಣದಲ್ಲಿ ಭವಾನಿ ಅವರ ಹೆಸರೂ ಇದ್ದುದರಿಂದ ಅವರು ನಿರೀಕ್ಷಣಾ ಜಾಮೀನು ಕೋರಿದ್ದರು.

ಅವರನ್ನು ಬಂಧಿಸದಂತೆ ಹೈಕೋರ್ಟ್‌ನ ಜನಪ್ರತಿನಿಧಿಗಳ ವಿಶೇಷ ನ್ಯಾಯಪೀಠ ಮಧ್ಯಂತರ ಜಾಮೀನು ನೀಡಿತ್ತು. ತನಿಖಾಧಿಕಾರಿ ಮುಂದೆ ಹಾಜರಾಗಿ ತನಿಖೆಗೆ ಸಹಕರಿಸುವಂತೆ ಇದೇ 7ರಂದು ಸೂಚಿಸಿತ್ತು.

## ದಾವಣಗೆರೆ: 1.52 ಲಕ್ಷ ವಿವಿಧ ಪ್ರಭೇದದ ಗಿಡಗಳು ಮಾರಾಟಕ್ಕೆ ಲಭ್ಯ

ಬೆಳೆಸಿ, ರೈತರಿಗೆ ಕಡಿಮೆ ದರದಲ್ಲಿ ಮಾರಾಟ ಮಾಡುತ್ತದೆ.

ತೋಟಗಾರಿಕೆ ಬೆಳೆಗಳಾದ ಅಡಿಕೆ (ಸ್ಥಳೀಯ), ತೆಂಗು (ಅರಸಿಕೆರೆ ಟಾಲ್), ನಿಂಬೆ (ಸ್ಥಳೀಯ) ಮಾತ್ರವಲ್ಲದೆ ದುರಂತ್, ಕ್ರೋಟಾನ್, ದಾಸವಾಳ ಸೇರಿದಂತೆ ಇನ್ನಿತರ ಅಲಂಕಾರಿಕ ಗಿಡಗಳೂ ಮಾರಾಟಕ್ಕೆ ಲಭ್ಯ ಇವೆ.

ಅಡಿಕೆ ಗಿಡವೊಂದಕ್ಕೆ 25, ತೆಂಗು, 75, ನಿಂಬೆ, 8 ದರ ನಿಗದಿಪಡಿಸಿದ್ದು, ಅಲಂಕಾರಿಕ ಗಿಡಗಳನ್ನು ಕನಿಷ್ಠ 15 ರಿಂದ ಗರಿಷ್ಠ 30 ರ ವರೆಗೆ ಮಾರಾಟ ಮಾಡಲಾಗುತ್ತಿದೆ.

ಜೂನ್ ಮೊದಲ ವಾರದಿಂದ ಸಸಿಗಳನ್ನು ಮಾರಾಟ ಮಾಡಲಾಗುತ್ತಿದ್ದು, ಈಗಾಗಲೇ ಶೇ 5ರಿಂದ ಶೇ 10ರಷ್ಟು ಗಿಡಗಳನ್ನು ಮಾರಾಟ ಮಾಡಲಾಗಿದೆ.

ಜುಲೈ ಅಂತ್ಯದ ವೇಳೆಗೆ ಎಷ್ಟು ಗಿಡಗಳು ಮಾರಾಟ ಆಗಿವೆ ಎಂಬುದನ್ನು ನೋಡಿ-ಕೊಂಡು ಮುಂದಿನ ವರ್ಷಕ್ಕೆ ಹೊಸ ಗುರಿಯನ್ನು ನಿಗದಿಪಡಿಸಲು ತೋಟಗಾರಿಕೆ ಇಲಾಖೆ ಮುಂದಾಗಿದೆ.

## ರೇಣುಕಾಸ್ವಾಮಿ ಹತ್ಯೆ ಖಂಡಿಸಿ ವೀರಶೈವ ಜಂಗಮ ಸಮಾಜ ಪ್ರತಿಭಟನೆ

ಇಂತಹದೇ ಕ್ರೌರ್ಯದಿಂದ ನೇಹಾ ಹತ್ಯೆ ನಡೆದಿತ್ತು' ಎಂದು ಹೇಳಿದರು.

'ಇತ್ತೀಚಿನ ಸಿನಿಮಾಗಳಲ್ಲಿ ಕ್ರೌರ್ಯ ವಿಜೃಂಭಿಸುತ್ತಿದೆ. ಇಂತಹ ಸಿನಿಮಾಗಳು ಯುವ ಸಮೂಹವನ್ನು ಪ್ರಚೋದಿಸುತ್ತಿವೆ. ಸಮಾಜವನ್ನು ದಾರಿ ತಪ್ಪಿಸುವ ಸಿನಿಮಾ, ಧಾರಾವಾಹಿಗಳು ಪ್ರಸಾರವಾಗುತ್ತಿವೆ.

ಸೆನ್ಸಾರ್ ಮಂಡಳಿ ಇಂತಹ ಸಿನಿಮಾಗಳ ಮೇಲೆ ವಿಶೇಷ ಗಮನ ಇಡಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರ ಇತ್ತ ಗಮನ ಹರಿಸಬೇಕು' ಎಂದು ಆಗ್ರಹಿಸಿದರು.

ವೀರಶೈವ ಜಂಗಮ ಸಮಾಜದ ಮುಖಂಡರಾದ ಎ.ಎಂ.ಕೊಟ್ರೇಶ್, ದಾಕ್ಷಾಯಣಮ್ಮ, ಪುಷ್ಪಾ, ರಾಜೇಶ್ವರಿ, ಪಿ.ಜಿ.ರಾಜಶೇಖರ ಇದ್ದರು.

## ಅಮಿತ್ ಶಾ ವಿರುದ್ಧ ಟೀಕೆ: ರಾಹುಲ್ ಗಾಂಧಿ ವಿರುದ್ಧದ ಮಾನ ಹಾನಿ ಪ್ರಕರಣದ ವಿಚಾರಣೆ ಜೂ. 26ಕ್ಕೆ ಮುಂದೂಡಿಕೆ

ಗಾಂಧಿ ನ್ಯಾಯಾಲಯಕ್ಕೆ ಹಾಜರಾಗಿದ್ದರು ಮತ್ತು ನ್ಯಾಯಾಲಯವು ಅವರಿಗೆ ಜಾಮೀನು ನೀಡಿತ್ತು.

ರಾಹುಲ್ ಗಾಂಧಿ ಅವರು ಬೆಂಗಳೂರಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅಮಿತ್ ಶಾ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಆಗಸ್ಟ್ 4, 2018 ರಂದು ದೂರು ದಾಖಲಿಸಲಾಗಿದೆ.

ಬಿಜೆಪಿಯು ಪ್ರಾಮಾಣಿಕ ಮತ್ತು ಸ್ವಚ್ಛ ರಾಜಕಾರಣದಲ್ಲಿ ನಂಬಿಕೆ ಇದೆ ಎಂದು ಹೇಳಿಕೊಳ್ಳುತ್ತಿದೆ.

ಆದರೆ ಕೊಲೆ ಪ್ರಕರಣದಲ್ಲಿ "ಆರೋಪಿ"ಯಾಗಿರುವ ವ್ಯಕ್ತಿಯನ್ನು ಪಕ್ಷದ ಅಧ್ಯಕ್ಷರನ್ನಾಗಿ ಮಾಡಿದೆ ಎಂದು ರಾಹುಲ್ ಗಾಂಧಿ ಆರೋಪಿಸಿರುವುದಾಗಿ ದೂರುದಾರರು ಉಲ್ಲೇಖಿಸಿದ್ದಾರೆ.

## ಇಲಾಖಾ ನೌಕರರ ಹೆಸರು ಹಾಗೂ ವಿವರ ಸಲ್ಲಿಸಲು

ದಾವಣಗೆರೆ:-

ಪ್ರತಿ ವರ್ಷ ಜನವರಿ ಅಥವಾ ಫೆಬ್ರವರಿ 2024ನೇ ಮಾಹೆಯಲ್ಲಿ ಎಲ್ಲಾ ಇಲಾಖಾ ನೌಕರರಿಂದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘಕ್ಕೆ ವಾರ್ಷಿಕ ಸದಸ್ಯತ್ವ ಶುಲ್ಕ ರೂ.200/- (ಎರಡು ನೂರು ರೂಪಾಯಿ) ಗಳನ್ನು ಕಟಾಯಿಸಿರುವ ನೌಕರರ ವಿವರವನ್ನು ನೀಡಲು ತಿಳಿಸಿರುತ್ತಾರೆ.

ಜಿಲ್ಲಾ ಸಂಘದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಿ ಚುನಾವಣೆ ನಡೆಸಲು ಅರ್ಹ ಮತದಾರರನ್ನು ನಿಗಧಿತ ನಮೂನೆಯಲ್ಲಿ ತಮ್ಮ ಇಲಾಖೆ ಹಾಗೂ ಆಧೀನ ಕಛೇರಿಗಳಲ್ಲಿ (ದಾವಣಗೆರೆ ತಾಲ್ಲೂಕು ವ್ಯಾಪ್ತಿಗೆ ಸಂಬಂಧಿಸಿದಂತೆ ಅರ್ಹ ಮತದಾರರ ಪಟ್ಟಿ ತಯಾರಿಸಲು ವಿವರವಾದ ಮಾಹಿತಿಯನ್ನು) ಭರ್ತಿ ಮಾಡಿ ಪ್ರತಿಯನ್ನು ಜಿಲ್ಲಾ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಮುದಾಯ ಭವನ, ನಿಜಲಿಂಗಪ್ಪ ಬಡಾವಣೆ, ರಿಂಗ್ ರೋಡ್ ಸರ್ಕಲ್, ದಾವಣಗೆರೆ ಜೂನ್ 21 ರೊಳಗಾಗಿ ಕಳುಹಿಸಬೇಕೆಂದು ಕ.ರಾ.ಸ.ನೌ.ಸಂಘದ ಜಿಲ್ಲಾಧ್ಯಕ್ಷರದ ವೀರೇಶ್.ಎಸ್. ಒಡೆಯನಪುರ ತಿಳಿಸಿದ್ದಾರೆ.

## ಕಲಬುರಗಿಯಲ್ಲಿ ಶೀಘ್ರದಲ್ಲೇ ಜಯದೇವ ಆಸ್ಪತ್ರೆ ಲೋಕಾರ್ಪಣೆ



ಕಲಬುರಗಿ:-

ಕಲಬುರಗಿಯಲ್ಲಿ ಸುಮಾರು 192 ಕೋಟಿ ರೂ. ಕೆ.ಕೆ.ಆರ್.ಡಿ.ಬಿ. ಅನುದಾನದಡಿ ನಿರ್ಮಿಸಲಾಗುತ್ತಿರುವ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಆಸ್ಪತ್ರೆ ಬಹುತೇಕ ಕಾಮಗಾರಿ ಮುಗಿದಿದ್ದು, ಕೊನೆ ಹಂತದ ಕಾಮಗಾರಿ ಭರದಿಂದ ಸಾಗಿದೆ. 371ಜೆ ಜಾರಿ ದಶಮಾನೋತ್ಸವದ ಕೊಡುಗೆ-ಯಾಗಿ ಈ ಆಸ್ಪತ್ರೆ ಆಗಸ್ಟ್ ಮಾಸಾಂತ್ಯಕ್ಕೆ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ನಮ್ಮ ಸರ್ಕಾರ ಸಮರ್ಪಿಸಲಿದೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು. ಸೋಮವಾರ ಇಲ್ಲಿ ನಿರ್ಮಾಣದ ಹಂತದಲ್ಲಿರುವ ಜಯದೇವ ಹೃದ್ರೋಗ ಆಸ್ಪತ್ರೆಗೆ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದ ಅವರು, ಬರುವ ಆಗಸ್ಟ್ ಅಂತ್ಯ ಅಥವಾ ಸೆಪ್ಟೆಂಬರ್ ಮೊದಲ ವಾರದಲ್ಲಿ 371 ಹಾಸಿಗೆ ಸಾಮರ್ಥ್ಯದ ಈ ಆಸ್ಪತ್ರೆ ಲೋಕಾರ್ಪಣೆಗೊಳಿಸಿ ಜಿಮ್ಸ್‌ನಲ್ಲಿನ ಆಸ್ಪತ್ರೆಯನ್ನು ನೂತನ ಕಟ್ಟಡಕ್ಕೆ ಸ್ಥಳಾಂತರಿಸಲಾಗುವುದು ಎಂದರು. ಪ್ರಸ್ತುತ ಜಯದೇವ ಆಸ್ಪತ್ರೆಗೆ ಸಿಬ್ಬಂದಿಗಳಿದ್ದು, ನೂತನ ಕಟ್ಟಡ ನಿರ್ಮಾಣ ನಂತರ ಹಾಸಿಗೆ ಸಾಮರ್ಥ್ಯ ಹೆಚ್ಚಳ ಹಿನ್ನೆಲೆಯಲ್ಲಿ ಅವಶ್ಯಕತೆ ಅನುಗುಣವಾಗಿ ಸಿಬ್ಬಂದಿ ಭರ್ತಿ ಮಾಡಿಕೊಳ್ಳಲಾಗುವುದು ಎಂದು ಸಿಬ್ಬಂದಿ ನೇಮಕಾತಿ ಬಗ್ಗೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಸ್ಪಷ್ಟನೆ ನೀಡಿದರು. ಹಿಂದೆ ನಾನು ವೈದ್ಯಕೀಯ ಸಚಿವನಾಗಿದ್ದಾಗ ಜಿಲ್ಲೆಗೆ ಟ್ರಾಮಾ ಸೆಂಟರ್ ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮಂಜೂರು ಮಾಡಿಸಿದ್ದೆ. ನಂತರ ಬಂದ ಸರ್ಕಾರ ಈ ಯೋಜನೆಗೆ ಯಾವುದೇ ವೇಗ ನೀಡಲಿಲ್ಲ. ಇದೀಗ ನಮ್ಮ ಸರ್ಕಾರ ಬಂದ ಮೇಲೆ ಈಗಾಗಲೆ ಟ್ರಾಮಾ ಸೆಂಟರ್ ಉದ್ಘಾಟಿಸಿ ಸಾರ್ವಜನಿಕರಿಗೆ ಸಮರ್ಪಿಸಲಾಗಿದೆ ಎಂದರು. ಜಿಮ್ಸ್ ಆವರಣದಲ್ಲಿನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾಮಗಾರಿ ಸಹ ಅಂತಿಮ ಹಂತದಲ್ಲಿದ್ದು, ಇದರ ಪೀಠೋಪಕರಣಕ್ಕೆ ಟೆಂಡರ್ ಕರೆಯಲಾಗಿದೆ. ಆಸ್ಪತ್ರೆಗೆ ಸಿಬ್ಬಂದಿ ನೇಮಕಾತಿಗೂ ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಪೂರ್ಣ ಪ್ರಮಾಣದೊಂದಿಗೆ ಈ ಆಸ್ಪತ್ರೆ ಸಹ ಆರಂಭಿಸಲಾಗುವುದು. ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಬಡವರಿಗೆ ಅತ್ಯಂತ ಕಡಿಮೆ ದರದಲ್ಲಿ ಚಿಕಿತ್ಸೆ ನೀಡಲಾಗುವುದು. ಜಿಮ್ಸ್‌ನಲ್ಲಿನ ಇಲ್ಲದ ವಿಶೇಷ ವೈದ್ಯಕೀಯ ಸೇವೆಗಳು ಇಲ್ಲಿ ಲಭ್ಯವಾಗಲಿದೆ ಎಂದ ಅವರು, ಇಂತಹ ಸೇವೆಗಳಿಗೆ ಖಾಸಗಿ ಆಸ್ಪತ್ರೆಗೆ ಬಡ ಜನ ಹೆಚ್ಚಿನ ಹಣ ವ್ಯಯಿಸಬೇಕಿತ್ತು ಎಂದರು.

## ವಿದ್ಯುತ್ ವ್ಯತ್ಯಯ

ದಾವಣಗೆರೆ:-

220/66/11 ಕೆ.ವಿ. ಎಸ್.ಆರ್.ಎಸ್. ಸ್ವಿಕರಣಾ ಕೇಂದ್ರದಲ್ಲಿ ತುರ್ತು ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಜೂನ್ 19 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಓಬಜ್ಜಿಹಳ್ಳಿ 66/11ಕೆ.ವಿ. ವಿದ್ಯುತ್ ವಿತರಣ ಕೇಂದ್ರಗಳಿಂದ ಸರಬರಾಜಾಗುವ 11ಕೆ.ವಿ. ವಿದ್ಯುತ್ ಮಾರ್ಗಗಳಲ್ಲಿ ಬರುವ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಎಫ್-10 ಸರಸ್ವತಿ ಫೀಡರ್ ವ್ಯಾಪ್ತಿಯ ಸರಸ್ವತಿ ಬಡಾವಣೆ ಎ, ಬಿ & ಸಿ ಬ್ಲಾಕ್, ಜೀವನ್ ಭೀಮಾನಗರ, ಚಿಕ್ಕಮಣಿ ದೇವರಾಜ್ ಅರಸ್ ಬಡಾವಣೆ, ಜಯನಗರ ಎ & ಬಿ ಬ್ಲಾಕ್ ,ಎಸ್.ಎಸ್. ಹೈಟೆಕ್ ಆಸ್ಪತ್ರೆ ರಸ್ತೆ, ಸಾಯಿ ಬಾಬ ದೇವಸ್ಥಾನದ ಸುತ್ತಮುತ್ತ, ಲಕ್ಷ್ಮೀ ಬಡಾವಣೆ ಹಾಗೂ ಸುತ್ತಮತ್ತಲಿನ ಪ್ರದೇಶಗಳು. ಎಫ್-11 ವಾಟರ್ ವರ್ಕ್ಸ್ ಫೀಡರ್ ವ್ಯಾಪ್ತಿಯ ದೂರದರ್ಶನ ಕೇಂದ್ರ, ಮಹಾನಗರ ಪಾಲಿಕೆ ನೀರು ಸರಬರಾಜು ಘಟಕಗಳು, ಸರ್ಕ್ಯೂಟ್ ಹೌಸ್, ಭೂಸೇನಾ ನಿಗಮ, ಜಿಲ್ಲಾ ಪಂಚಾಯತ್ ಕಛೇರಿ ಎಫ್-13 ಇಂಡಸ್ಟ್ರಿಯಲ್ ಫೀಡರ್ ವ್ಯಾಪ್ತಿಯ ಇಂಡಸ್ಟ್ರಿಯಲ್ ಏರಿಯ ಲೋಕಿಕೆರೆ ರಸ್ತೆ, ಸುಬ್ರಹ್ಮಣ್ಯನಗರ, ಎಸ್.ಎ .ರವೀಂದ್ರನಾಥ ಬಡಾವಣೆ ಮತ್ತು ಸುತ್ತ ಮುತ್ತ ಪ್ರದೇಶಗಳು, ಎಫ್-14 ವಿದ್ಯಾನಗರ ಫೀಡರ್ ವ್ಯಾಪ್ತಿಯ ಶಿವಕುಮಾರಸ್ವಾಮಿ ಬಡಾವಣೆ 1 ಮತ್ತು 2ನೇ ಹಂತ, ಹದಡಿ ರಸ್ತೆ, ಸೇಂಟ್ ಜಾನ್ ಸ್ಕೂಲ್, ಐ.ಟಿ.ಐ. ಕಾಲೇಜು, ರಿಂರಸ್ತೆ, ಶ್ರೀನಿವಾಸ ನಗರ, ತರಳಬಾಳು ಬಡಾವಣೆ ಮತ್ತು ಸುತ್ತ ಮುತ್ತ ಪ್ರದೇಶಗಳು. ಎಫ್-15 ರಂಗನಾಥ ಫೀಡರ್ ವ್ಯಾಪ್ತಿಯ ಯುಬಿಡಿಟಿ ಲೇಡಿಸ್ ಹಾಸ್ಟೆಲ್, ಜಮುನಾ ವಾಣಿಜ್ಯ ಮಳಿಗೆ, ಸವಿತಾ ಹೋಟೆಲ್, ವಿದ್ಯಾನಗರ, ತರಳಬಾಳು ಬಡಾವಣೆ ಗಾಂಧಿ ಮೂರ್ತಿ ವೃತ್ತದಿಂದ ಈಶ್ವರ ಪಾರ್ವತಿ ದೇವಸ್ಥಾನ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು, ಎಫ್-22 ಎಸ್ ಎಸ್ ಹೈಟೆಕ್ ಫೀಡರ್ ವ್ಯಾಪ್ತಿಯ ಎಸ್.ಓ.ಜಿ ಕಾಲೋನಿ ಎ, ಬಿ & ಸಿ ಬ್ಲಾಕ್, ಬುದ್ಧ, ಬಸವ ಭೀಮ ನಗರ , ಕರ್ನಾಟಕ ಬೀಜ ನಿಗಮ ಹಾಗೂ ಸುತ್ತಮತ್ತಲಿನ ಪ್ರದೇಶಗಳು. ಸ್ವಾಮಿ ವಿವೇಕಾನಂದ ಬಡಾವಣೆ, ಎಲ್.ಐ.ಸಿ ಕಾಲೋನಿ, ಆಂಜನೇಯ ಬಡಾವಣೆ, ವಿನಾಯಕ ಬಡಾವಣೆ ಹಾಗೂ 6ನೇ ಮತ್ತು 7ನೇ ಮೈಲಿಕಲ್ಲು, ಪಾಮೇನಹಳ್ಳಿ, ಬೆಳವನೂರು, ತುರ್ಚಗಟ್ಟ, ಹಳೇಬಿಸಲೇರಿ, ಹೊಸಬಿಸಲೇರಿ, ಜರಿಕ-ಟ್ಟೆ, ಮುದಹದಡಿ, ಹಳೇಕುಂದವಾಡ, ಹೊಸಕುಂದವಾಡ, ಶಿರಮಗೊಂಡನಹಳ್ಳಿ, ನಾಗನೂರು, ಶಾಮನೂರು, ಜೆ.ಎಚ್ ಪಟೇಲ್ ಬಡಾವಣೆ ಸುತ್ತಮುತ್ತ ಹಾಗೂ ಇತರೆ ಪ್ರದೇಶಗಳು.

ಮಾಗಾನಹಳ್ಳಿ, ಮಾಗಾನಹಳ್ಳಿ ಕ್ಯಾಂಪ್, ಓಬಜ್ಜಿಹಳ್ಳಿ, ಓಬಜ್ಜಿಹಳ್ಳಿ ಕ್ಯಾಂಪ್, ಕಡ್ಲೇಬಾಳು, ಹಳೆಕಡ್ಲೆಬಾಳು, ಮಾಳಗೊಂಡನಹಳ್ಳಿ, ಅರಸಾಪುರ, ಬದುನಾಯಕನತಾಂಡ, ಚಿಕ್ಕಓಬಜ್ಜೀಹಳ್ಳಿ, ದೊಡ್ಡಓಬಜ್ಜೀಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

## ವಿಧಾನಸಭಾ ಚುನಾವಣೆ: ಬಿಜೆಪಿ ಉಸ್ತುವಾರಿಗಳಾಗಿ 5 ಕೇಂದ್ರ ಸಚಿವರ ನೇಮಕ!

ನವದೆಹಲಿ:-

ಲೋಕಸಭಾ ಚುನಾವಣೆಯಲ್ಲಿ ಸ್ವತಂತ್ರವಾಗಿ ಸರ್ಕಾರ ರಚಿಸುವಷ್ಟು ಬಹುಮತ ಪಡೆಯುವಲ್ಲಿ ಬಿಜೆಪಿ ವಿಫಲವಾಗಿದ್ದು, ಈಗ ವಿಧಾನಸಭೆಯತ್ತ ಬಿಜೆಪಿ ತನ್ನ ಗಮನವನ್ನು ಕೇಂದ್ರೀಕರಿಸಿದೆ. ವರ್ಷಾಂತ್ಯಕ್ಕೆ ಮಹಾರಾಷ್ಟ್ರ, ಜಾರ್ಖಂಡ್, ಹರ್ಯಾಣ, ಜಮ್ಮು-ಕಾಶ್ಮೀರದಲ್ಲಿ ಚುನಾವಣೆಗಳು ನಡೆಯಲಿದ್ದು, ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿ ನಡ್ಡಾ ಸೋಮವಾರದಂದು ಈ ರಾಜ್ಯಗಳಿಗೆ ಚುನಾವಣಾ ಉಸ್ತುವಾರಿ ಹಾಗೂ ಸಹ ಉಸ್ತುವಾರಿಗಳನ್ನು ನೇಮಕ ಮಾಡಿದ್ದಾರೆ. ಕೇಂದ್ರ ಸಚಿವ ಭೂಪೇಂದ್ರ ಯಾದವ್ ಅವರನ್ನು ಮಹಾರಾಷ್ಟ್ರಕ್ಕೆ ಉಸ್ತುವಾರಿಯನ್ನಾಗಿ ನೇಮಕ ಮಾಡಿದ್ದರೆ, ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಸಹ ಉಸ್ತುವಾರಿಯಾಗಿದ್ದಾರೆ. ಹರ್ಯಾಣಗೆ ಕೇಂದ್ರ ಸಚಿವರಾದ ಧರ್ಮೇಂದ್ರ ಪ್ರಧಾನ್ ಹಾಗೂ ಮಾಜಿ ತ್ರಿಪುರಾ ಸಿಎಂ ಬಿಪ್ಲಬ್ ದೇವ್ ಅವರನ್ನು ಉಸ್ತುವಾರಿ, ಸಹ ಉಸ್ತುವಾರಿಯನ್ನಾಗಿ



ನೇಮಿಸಲಾಗಿದೆ. ಜಾರ್ಖಂಡ್‌ಗೆ, ಕೇಂದ್ರ ಸಚಿವ ಮತ್ತು ಮಧ್ಯಪ್ರದೇಶದ ಮಾಜಿ ಸಿಎಂ ಶಿವರಾಜ್ ಸಿಂಗ್ ಚೌಹಾಣ್ ಉಸ್ತುವಾರಿ ಮತ್ತು ಅಸ್ಸಾಂ ಸಿಎಂ ಹಿಮಂತ ಬಿಸ್ವಾ ಶರ್ಮಾ ಸಹ ಉಸ್ತುವಾರಿ. ಕೇಂದ್ರ ಸಚಿವ ಜಿ ಕಿಶನ್ ರೆಡ್ಡಿ ಅವರನ್ನು ಜಮ್ಮು-ಕಾಶ್ಮೀರಕ್ಕೆ ಉಸ್ತುವಾರಿಯಾಗಿ ನೇಮಿಸಲಾಗಿದೆ. ಈ ವರ್ಷದ ಕೊನೆಯಲ್ಲಿ ಮಹಾರಾಷ್ಟ್ರ, ಹರಿಯಾಣ ಮತ್ತು ಜಾರ್ಖಂಡ್‌ನಲ್ಲಿ ವಿಧಾನಸಭಾ ಚುನಾವಣೆಗಳು ನಡೆಯಲಿರುವಾಗ, ಜಮ್ಮು ಮತ್ತು ಕಾಶ್ಮೀರದಲ್ಲಿ ಸೆಪ್ಟೆಂಬರ್‌ನೊಳಗೆ ಚುನಾವಣೆ ನಡೆಸುವಂತೆ ಸುಪ್ರೀಂ ಕೋರ್ಟ್ ಚುನಾವಣಾ ಆಯೋಗ-ಕ್ಕೆ ಸೂಚಿಸಿದೆ. "ಈ ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಾದೇಶಿಕ ರಾಜಕೀಯವನ್ನು ರೂಪಿಸುವುದಲ್ಲದೆ, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ರಾಷ್ಟ್ರೀಯ ರಾಜಕೀಯ ನಿರೂಪಣೆಗಳ ಮೇಲೆ ಪ್ರಭಾವ ಬೀರುತ್ತದೆ" ಎಂದು ಬಿಜೆಪಿಯ ಹಿರಿಯ ಪದಾಧಿಕಾರಿಯೊಬ್ಬರು ಹೇಳಿದ್ದಾರೆ. ಕಳೆದ ವರ್ಷ ಮಧ್ಯಪ್ರದೇಶದಲ್ಲಿ ಬಿಜೆಪಿಯ ಯಶಸ್ವಿ ಪ್ರಚಾರದ ಹೆಗ್ಗಳಿಕೆಗೆ ಪಾತ್ರರಾದ ಭೂಪೇಂದ್ರ ಯಾದವ್ ಮತ್ತು ವೈಷ್ಣವ್ ಅವರಿಗೆ "ಮಹಾರಾಷ್ಟ್ರದಲ್ಲಿ ಅಪೇಕ್ಷಿತ ಫಲಿತಾಂಶಗಳನ್ನು ತರುವ ಕಾರ್ಯವನ್ನು ನಿಯೋಜಿಸಲಾಗಿದೆ" ಎಂದು ಬಿಜೆಪಿ ನಾಯಕರೊಬ್ಬರು ಹೇಳಿದ್ದಾರೆ.

"ಶಿವಸೇನೆ ಮತ್ತು ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿಯ ಏಕನಾಥ್ ಶಿಂಧೆ ಬಣದೊಂದಿಗೆ ಮೈತ್ರಿ ಮಾಡಿಕೊಂಡ ನಂತರ, ನಮ್ಮ ಪಕ್ಷ ಈಗ ಕಾಂಗ್ರೆಸ್-ಶಿವಸೇನೆ-ಎನ್‌ಸಿಪಿ ಒಕ್ಕೂಟವನ್ನು ಎದುರಿಸುವ ಗುರಿ ಹೊಂದಿದೆ" ಎಂದು ಅವರು ಹೇಳಿದರು. ಸಾಂಸ್ಥಿಕ ನಿರ್ಧಾರಗಳನ್ನು ತೆಗೆದುಕೊಳ್ಳುವ ತಂಡಕ್ಕೆ ನಿಕಟವಾಗಿರುವ ಬಿಜೆಪಿಯ ಹಿರಿಯ ನಾಯಕರೊಬ್ಬರು, "ಪರಿಣಿತ ನಾಯಕರನ್ನು ನೇಮಿಸುವಲ್ಲಿ ಬಿಜೆಪಿಯ ಪೂರ್ವಭಾವಿ ನಿಲುವು ಲೋಕಸಭೆ ಚುನಾವಣೆಯಿಂದ ಲಾಭವನ್ನು ಕ್ರೋಢೀಕರಿಸುವ ಅದರ ತಂತ್ರವನ್ನು ಪ್ರತಿಬಿಂಬಿಸುತ್ತದೆ" ಎಂದು ಹೇಳಿದರು.

## ವಯನಾಡು ಕ್ಷೇತ್ರಕ್ಕೆ ರಾಹುಲ್ ರಾಜೀನಾಮೆ ಅಖಾಡಕ್ಕೆ ಪ್ರಿಯಾಂಕಾ ಗಾಂಧಿ!

ವಯನಾಡಿ:-

ದೇಶಾದ್ಯಂತ 7 ಹಂತಗಳಲ್ಲಿ ನಡೆದ 18ನೇ ಲೋಕಸಭೆ ಚುನಾವಣೆಯಲ್ಲಿ ಯಾವ ಪಕ್ಷಕ್ಕೂ ಏಕ ಬಹುಮತದೊಂದಿಗೆ ಸರ್ಕಾರ ರಚಿಸುವ ಶಕ್ತಿ ಕಂಡುಬಂದಿಲ್ಲ. ಆದರೂ ಬಿಜೆಪಿ ತನ್ನ ಮಿತ್ರಪಕ್ಷಗಳೊಂದಿಗೆ ಸೇರಿ ಸತತ ಮೂರನೇ ಬಾರಿಗೆ ಅಧಿಕಾರ ವಹಿಸಿಕೊಂಡಿದೆ.ಈ ಚುನಾವಣೆಯಲ್ಲಿ ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ, ಕೇರಳದ ವಯನಾಡು ಕ್ಷೇತ್ರದಿಂದ ಮತ್ತೆ ಸ್ಪರ್ಧಿಸಿದ್ದರು. ಮತದಾನ ಮುಗಿದ ನಂತರ ಅವರು ಕಾಂಗ್ರೆಸ್ ಭದ್ರಕೋಟೆಯಾದ ಉತ್ತರ ಪ್ರದೇಶದ ರಾಯ್ ಬರೇಲಿಯಲ್ಲೂ ನಾಮಪತ್ರ ಸಲ್ಲಿಸಿದರು. ಇದಾದ ಬಳಿಕ, ನಡೆದ ಮತ ಎಣಿಕೆ ವೇಳೆ ಎರಡೂ ಕ್ಷೇತ್ರಗಳಲ್ಲಿ ರಾಹುಲ್ ಗಾಂಧಿ ಗೆಲುವು ಸಾಧಿಸಿ ಅಚ್ಚರಿ ಮೂಡಿಸಿದರು. ವಯನಾಡಿನಲ್ಲಿ ರಾಹುಲ್ ಗಾಂಧಿ 6,47,445 ಮತಗಳನ್ನು ಪಡೆದು



ಆನಿ ರಾಜಾ ಅವರನ್ನು 3,64,422 ಮತಗಳ ಅಂತರದಿಂದ ಸೋಲಿಸಿದರು. ಅದೇ ರೀತಿ ಉತ್ತರಪ್ರದೇಶದ ರಾಯ್ ಬರೇಲಿ ಕ್ಷೇತ್ರದಲ್ಲಿ ರಾಹುಲ್ ಗಾಂಧಿ 6,87,649 ಮತಗಳನ್ನು ಪಡೆದು ಬಿಜೆಪಿ ಅಭ್ಯರ್ಥಿಯನ್ನು 3,90,030 ಮತಗಳ ಅಂತರದಿಂದ ಸೋಲಿಸಿದ್ದು ಗಮನಾರ್ಹ. ಈ ಹಿನ್ನೆಲೆಯಲ್ಲಿ, ರಾಹುಲ್ ಗಾಂಧಿ ಸ್ಪರ್ಧಿಸಿ ಗೆದ್ದ ಎರಡು ಕ್ಷೇತ್ರಗಳ ಪೈಕಿ, ಒಂದರಲ್ಲಿ ರಾಜೀನಾಮೆ ನೀಡಬೇಕಾಗಿದೆ. ಅಂ-ದರೆ, 2 ಕ್ಷೇತ್ರಗಳಲ್ಲಿ ಸ್ಪರ್ಧಿಸಿ ಗೆಲುವು ಸಾಧಿಸಿದ ಒಬ್ಬ ಅಭ್ಯರ್ಥಿ, 14 ದಿನಗಳೊಳಗೆ ಯಾವುದಾದರೊಂದು ಕಡೆ ಸಂಸದ ಅಥವಾ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂಬುದು ನಿಯಮ. ಇದನ್ನು ಆಧರಿಸಿ, ಇಂದು ರಾಹುಲ್ ಗಾಂಧಿ ವಯನಾಡು ಕ್ಷೇತ್ರ-ಕ್ಕೆ ರಾಜೀನಾಮೆ ನೀಡಲಿದ್ದಾರೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಧಿಕೃತವಾಗಿ ಘೋಷಿಸಿದ್ದಾರೆ. ಅಲ್ಲದೇ ಆ ಕ್ಷೇತ್ರದಲ್ಲಿ ನಡೆಯಲಿರುವ ಉಪ ಚುನಾವಣೆಯಲ್ಲಿ ರಾಹುಲ್ ಗಾಂಧಿಯ ಸಹೋದರಿ ಹಾಗೂ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಸ್ಪರ್ಧಿಸಲಿದ್ದಾರೆ ಎಂದೂ ಅವರು ಹೇಳಿದ್ದಾರೆ. 2019ರಲ್ಲಿ ವಯನಾಡು ಕ್ಷೇತ್ರದಿಂದ ಆಯ್ಕೆಯಾದ ರಾಹುಲ್ ಗಾಂಧಿ ಅದೇ ವರ್ಷ ಕಾಂಗ್ರೆಸ್ ಭದ್ರಕೋಟೆಯಾದ ಅಮೇಥಿಯಲ್ಲೂ ಸ್ಪರ್ಧೆಗಿಳಿದರು. ಆದರೆ, ಅಲ್ಲಿ ಸ್ಮೃತಿ ಇರಾನಿ ಎದುರು ಸೋತರು. ತರುವಾಯ, ಅವರು ವಯನಾಡ್ ಕ್ಷೇತ್ರದ ಸಂಸದರಾಗಿ ಮುಂದುವರೆದರು. ಈ ಬಾರಿಯೂ ವಯನಾಡ್‌ನಲ್ಲಿ ಸ್ಪರ್ದೆಗಿಳಿದ ಅವರು ಅಮೇಥಿಯಲ್ಲಿ ಸ್ಪರ್ಧಿಸುವಂತೆ ಕಾಂಗ್ರೆಸ್‌ನ ಹಿರಿಯ ನಾಯಕರ ಒತ್ತಾಯದ ಹೊರತಾಗಿಯೂ ಅವರು ಸ್ಪರ್ಧಿಸಲಿಲ್ಲ.

ಏತನ್ಮಧ್ಯೆ, ಕಾಂಗ್ರೆ ಸ್ ಭದ್ರಕೋ-ಟೆಯಾದ ರಾಯ್ ಬರೇ ಲಿಯ ಸಂಸದೆ ಸೋನಿಯಾ ಗಾಂಧಿ, ರಾಜ್ಯಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು. ನಂತರ ಆ ಕ್ಷೇತ್ರದಲ್ಲಿ ರಾಹುಲ್ ಅವರನ್ನು ಕಣಕ್ಕಿಳಿಸಲಾಯಿತು.

ಈಗ ಅವರು ರಾಯ್ ಬರೇಲಿಯ ಸಂಸದರಾಗಿ ಆಯ್ಕೆಯಾಗಿದ್ದಾರೆ. ರಾಜಕೀಯಕ್ಕೆ ಬರಲು ನನಗೆ ಯಾವುದೇ ಹಿಂಜರಿಕೆ ಇಲ್ಲ ಪ್ರಿಯಾಂಕಾ ಗಾಂಧಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ರಾಹುಲ್ ಗಾಂಧಿ, "ವಯನಾಡಿನ ಜನತೆಗೆ ನನ್ನ ಧನ್ಯವಾದಗಳು; ವಯನಾಡಿಗೆ ಭೇಟಿ ನೀಡುವುದನ್ನು ಮುಂದುವರಿಸಲಾಗುವುದು.

# ತೈಲ ಬೆಲೆ ಹೆಚ್ಚಳ ವಿರೋಧಿಸಿ ಎತ್ತಿನ ಬಂಡಿಯೊಂದಿಗೆ ಬಿಜೆಪಿ ಪ್ರತಿಭಟನೆ

ಕಲಬುರಗಿ :-

ತೈಲ ಬೆಲೆ ಹೆಚ್ಚಳವನ್ನು ವಿರೋಧಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಸೋಮವಾರ ಎತ್ತಿನ ಬಂಡಿಯೊಂದಿಗೆ ಬೃಹತ್ ಪ್ರತಿಭಟನೆ ಮಾಡಿದರು. ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಬಿಜೆಪಿ ಕಾರ್ಯಕರ್ತರು ಲೂಟಿ ಸರ್ಕಾರ ಎಂಬ ಘೋಷಣೆಗಳನ್ನು ಹಾಕಿದರು. ಈ ಸಂದರ್ಭದಲ್ಲಿ ಶಾಸಕ ಬಸವರಾಜ್ ಮತ್ತಿಮೂಡ್ ಅವರು ಮಾತನಾಡಿ, ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ತೆ-ಱಂದರೆ ಕೊಡುವ ಕೆಲಸ ಮಾಡುತ್ತಿದೆ. ಕೊಲೆ, ಸುಲಿಗೆ ಹೆಚ್ಚುತ್ತಿವೆ. ಎಲ್ಲ ರೀತಿಯಿಂದಲೂ ಕಾಂಗ್ರೆಸ್ ಸರ್ಕಾರ ಸಮಸ್ಯೆ ಮಾಡುತ್ತಿದೆ. ಗ್ಯಾರಂಟಿಗಳ ಮೂಲಕ ಜನರಿಗೆ ಮೋಸ ಮಾಡುತ್ತಿದೆ. ಪೆಟ್ರೋಲ್, ಡೀಸೆಲ್ ದರ ಕಡಿಮೆ ಮಾಡುತ್ತೇವೆ ಎಂದು ಹೇಳಿ ಅಧಿಕಾರಕ್ಕೆ ಬಂದ ಮೇಲೆ ಈಗ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು 3ರೂ.ಗಳು, 3-50ರೂ.ಗಳಿಗೆ ಹೆಚ್ಚಿಗೆ ಮಾಡಿದೆ ಎಂದು ಆರೋಪಿಸಿದರು. ರಾಜ್ಯ ಸರ್ಕಾರದಲ್ಲಿ ಅನೇಕ ಹಗರಣಗಳಿವೆ. ಯಾವುದೇ ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲ. ಹೀಗಾಗಿ ತೈಲ ಬೆಲೆಯನ್ನು ನಾವು ವಿರೋಧಿಸುತ್ತೇವೆ. ಹೆಚ್ಚಳ ದರ ಹಿಂಪಡೆಯುವವರೆಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ರಾಜ್ಯಾದ್ಯಂತ ಹೋರಾಟ ಮುಂದುವರೆಯಲಿದೆ ಎಂದು ಅವರು ಎಚ್ಚರಿಸಿದರು. ಬಿಜೆಪಿ ಗ್ರಾಮಾಂತರ ಜಿಲ್ಲಾ ಘಟಕದ ಅಧ್ಯಕ್ಷ ಶಿವರಾಜ್ ಪಾಟೀಲ್ ರದ್ದೇವಾಡಗಿ, ನಗರ ಜಿಲ್ಲಾಧ್ಯಕ್ಷ ಚಂದು



ಪಾಟೀಲ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಶಾಸಕರಾದ ಬಸವರಾಜ್ ಮತ್ತಿಮೂಡ್, ಡಾ. ಅವಿನಾಶ್ ಜಾಧವ್, ವಿಧಾನ ಪರಿಷತ್ ಸದಸ್ಯ ಶಶಿಲ್ ನಮೋಶಿ, ಮಾಜಿ ಶಾಸಕರಾದ ಅಮರನಾಥ್ ಪಾಟೀಲ್, ದತ್ತಾತ್ರೇಯ್ ಪಾಟೀಲ್ ರೇವೂರ್, ರಾಜಕುಮಾರ್ ಪಾಟೀಲ್ ತೆಲ್ಕೂರ, ಬಾಬುರಾವ್ ಚವ್ಹಾಣ್, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಹರ್ಷಾನಂದ್ ಗುತೆ-ದಾರ್, ಶಿವಕಾಂತ್ ಮಹಾಜನ್, ಶರಣಪ್ಪ ತಳವಾರ್, ಅವ್ವಣ್ಣ ಮ್ಯಾಕೇರಿ, ದಿಲೀಪ್ ಪಾಟೀಲ್, ಶಿವಯೋಗಿ ನಾಗನಹಳ್ಳಿ, ಉಮೇಶ್ ಪಾಟೀಲ್, ಬಸವರಾಜ್ ಮಾಲಿಪಾಟೀಲ್, ಸುರೇಶ್ ಸಜ್ಜನ್, ಶೋಭಾ ಪಾಟೀಲ್, ವಿಜಯಲಕ್ಷ್ಮೀ ಗೊಬ್ಬೂರಕರ್, ರಾಜು ಪಾಟೀಲ್ ನಾಗನಹಳ್ಳಿ, ಮಹೇಶ್ ರೆಡ್ಡಿ,ಅಣವೀರ್ ಪಾಟೀಲ್, ಮಹಾದೇವ್ ಬೇಳಮಗಿ, ಶಶಿಧರ್ ಸೂಗುರ್, ಸಂತೋಷ್ ಹಾದಿಮನಿ, ಬಾಬುರಾವ್ ಹಾಗರಗುಂಡಗಿ ಮುಂತಾದವರು ಪಾಲ್ಗೊಂಡಿದ್ದರು.

# ರಾಜ್ಯಕ್ಕೆ ಕೇಂದ್ರದಿಂದ ಭರ್ಜರಿ ಗಿಫ್ಟ್: ಸೋಮಣ್ಣ ಬಂಪರ್ ಘೋಷಣೆ



ಬೆಂಗಳೂರು:-

ರಾಜ್ಯದಲ್ಲಿ 30 ವರ್ಷದಿಂದ ಬಾಕಿ ಉಳಿದ 9 ರೈಲ್ವೆ ಯೋಜನೆಗಳನ್ನು ಎರಡು ವರ್ಷದಲ್ಲಿ ಪೂರ್ಣಗೊಳಿಸುವುದಾಗಿ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಬಂಪರ್ ಘೋಷಣೆ ಮಾಡಿದ್ದಾರೆ.

ರೈಲ್ವೆ ಸಚಿವರಾಗಿ ಅಧಿಕಾರ ಸ್ವೀಕರಿಸಿದ ನಂತರ ಮೊದಲ ಬಾರಿಗೆ ನೈರುತ್ಯ ರೈಲ್ವೆ ಅಧಿಕಾರಿಗಳೊಂದಿಗೆ ರಾಜ್ಯದ ರೈಲ್ವೆ ಯೋಜನೆಗಳ ಸ್ಥಿತಿ ಗತಿ ಕುರಿತಾಗಿ ಸಭೆ ನಡೆಸಿದ ಸಚಿವರು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ರಾಜ್ಯದಲ್ಲಿ ಕಳೆದ ಮೂರು ದಶಕಗಳಿಂದ ವಿಳಂಬವಾಗಿರುವ ಸುಮಾರು 1264 ಕಿಲೋ ಮೀಟರ್ ಒಳಗೊಂಡ 9 ರೈಲ್ವೆ ಯೋಜನೆ 2025 -26ರ ಅಂತ್ಯದೊಳಗೆ ಪೂರ್ಣಗೊಳಿಸುವುದಾಗಿ ಹೇಳಿದ್ದಾರೆ.

ತುಮಕೂರು -ಕಲ್ಯಾಣದುರ್ಗ - ರಾಯದುರ್ಗ, ತುಮಕೂರು -ಚಿತ್ರದುರ್ಗ -ದಾವಣಗೆರೆ, ಗಿಣಿಗೇರಾ -ರಾಯಚೂರು, ಬಾಗಲಕೋಟ -ಕುಡಚಿ, ಗದಗ -ವಾಡಿ, ಕಡೂರು -ಚಿಕ್ಕಮಗಳೂರು, ಶಿವಮೊಗ್ಗ -ಶಿಕಾರಿಪುರ -ರಾಣೆಬೆನ್ನೂರು, ಬೆಳಗಾವಿ -ಕಿತ್ತೂರು -ಧಾರವಾಡ, ಹಾಸನ -ಬೇಲೂರು ಯೋಜನೆಗಳನ್ನು ಎರಡು ವರ್ಷದೊಳಗೆ ಪೂರ್ಣಗೊಳಿಸುವುದಾಗಿ ತಿಳಿಸಿದ್ದಾರೆ.

ಬೆಂಗಳೂರು ಉಪನಗರ ರೈಲು ಯೋಜನೆ ಕಾಮಗಾರಿ ಚುರುಕುಗೊಳಿಸಲು ಕರ್ನಾಟಕ ರೈಲ್ವೆ ಮೂಲಸೌಕರ್ಯ ಅಭಿವೃದ್ಧಿ ನಿಗಮಕ್ಕೆ ಮುಂದಿನ 15 ದಿನಗಳಲ್ಲಿ ವ್ಯವಸ್ಥಾಪಕ ನಿರ್ದೇಶಕ ಸ್ಥಾನಕ್ಕೆ ರೈಲ್ವೆ ತಾಂತ್ರಿಕ ತಜ್ಞರ ನೇಮಕಾತಿಗೆ ಕ್ರಮ ವಹಿಸುವುದಾಗಿ ತಿಳಿಸಿದ್ದಾರೆ.

# ಹುಬ್ಬಳ್ಳಿ-ಧಾರವಾಡ ಬಸ್ ಸೌಲಭ್ಯ ಒದಗಿಸಲು ಮನವಿ

ಹಟ್ಟಿಚಿನ್ನದಗಣಿ:-

ಅವಳಿ ನಗರಗಳಾದ ಹುಬ್ಬಳ್ಳಿ-ಧಾರವಾಡ ಉತ್ತರ ಕರ್ನಾಟಕದ ವಿದ್ಯಾಕಾಶಿ ಎಂದು ಹೆಸರುವಾಸಿ. ಈ ಅವಳಿ ನಗರಗಳಿಗೆ ಬಹುದಿನಗಳಿಂದ ಹಟ್ಟಿ ಪಟ್ಟಣದಿಂದ ಬಸ್ ಸೌಲಭ್ಯಗಳಿದ್ದು, ಅದನ್ನು ಮುಂದುವರಿಸಲು ಪಟ್ಟಣದ ನಿವಾಸಿಗಳು, ಪಾಲಕರು, ಪ್ರಯಾಣಿಕರು ಸಂಬಂಧಿಸಿದ ಅಧಿಕಾರಿಗಳಲ್ಲಿ ಮಾಡಿಕೊಂಡಿದ್ದಾರೆ. ಮನವಿ ಕಲ್ಯಾಣ ಕರ್ನಾಟಕ ಭಾಗದ ಬಹುತೇಕ ವಿದ್ಯಾರ್ಥಿಗಳು ಪಿಯುಸಿ, ಪದವಿ, ಸ್ನಾತ-ಕೋತ್ತರ ಪದವಿಗಳಿಗಾಗಿ ಧಾರವಾಡವನ್ನು ನೆಚ್ಚಿಕೊಂಡಿರುವುದು ಬಹುಶಃ 1970-80ರಿಂದಲೂ ಇರಬಹುದು. ಹಲವು ವರ್ಷಗಳಿಂದ ಕೆಎಸ್ಆರ್‌ಟಿಸಿ ಮತ್ತು ಈಗಿನ ಎನ್‌ಕೆಎಸ್ಆರ್‌ಸಿ ಘಟಕವು ಹಟ್ಟಿ ಪಟ್ಟಣದಿಂದ ಹುಬ್ಬಳ್ಳಿ ಮತ್ತು ಧಾರವಾಡಕ್ಕೆ ಬಸ್‌ಗಳನ್ನು ಬೆಳಿಗ್ಗೆ ತೆರಳಿ, ಹಟ್ಟಿಗೆ ರಾತ್ರಿ ವಾಪಸ್ಸು ಬರುತ್ತಿದ್ದವು, ಈ ಬಸ್‌ಗಳೇ ಹಟ್ಟಿ ಪಟ್ಟಣದ ಪ್ರಯಾಣಿಕರಿಗೆ, ನಿವಾಸಿಗಳಿಗೆ, ವಿದ್ಯಾರ್ಥಿಗಳಿಗೆ ಹಾಗೂ ಕಾರ್ಮಿಕ ವರ್ಗಕ್ಕೆ ರಾತ್ರಿ ಸಮಯದಲ್ಲಿ ಬಹಳ ಅನುಕೂಲವಾಗಿದ್ದವು. ಆದರೆ ಕಳೆದ ಒಂದು ವರ್ಷದಿಂದ ಆ ಬಸ್‌ಗಳ ಸೌಲಭ್ಯ ದಿನನಿತ್ಯ ಹಟ್ಟಿಯಿಂದ ಬೆಳಿಗ್ಗೆ ಮತ್ತು ರಾತ್ರಿ ವೇಳೆ ಸಮಯಕ್ಕೆ ಸರಿಯಾಗಿ ಸಂಚರಿಸುತ್ತಿಲ್ಲಾ ಎಂಬ 'ದೂರುಗಳು ಕೇಳಿ ಬರುತ್ತಿವೆ. ರಾತ್ರಿ 9 ಗಂಟೆ ನಂತರ ಲಿಂಗಸೂಗೂರಿನಿಂದ ಹಟ್ಟಿ ಪಟ್ಟಣ- ಕ್ಕೆ ಹೋಗುವ ಕೊನೆಯ ಸಂಚಾರದ ಬಸ್‌ಗಳಾಗಿರುತ್ತೆಂದು ಹೇಳಲಾಗುತ್ತಿದೆ. ಹಟ್ಟಿ ಪಟ್ಟಣದ ವಿದ್ಯಾರ್ಥಿಗಳು ಈ ಬಸ್‌ಗಳನ್ನು ನೆಚ್ಚಿಕೊಂಡಿಲ್ಲ. ಆದ-ರೆ ಬಹುತೇಕ ಪಟ್ಟಣದ ಸುತ್ತಮುತ್ತಲಿನ ಹಳ್ಳಿಗಳಾದ ಕೋತಾ, ಗೌಡೂರು, ಗೆಜ್ಜಲಗಟ್ಟಾ, ವೀರಾಪೂರು, ನಿಲೋಗಲ್, ಆನ್ವರಿ, ಯಲಗಟ್ಟಾ ಹಾಗೂ ಪಟ್ಟಣ-ಕ್ಕೆ ಪಕ್ಕದ ತಾಲೂಕುಗಳ ಗ್ರಾಮಗಳಾದ ಯತಗಲ್, ವಂದಲಿ, ಗಲಗ, ಚಿಂಚ-ರಿಕಿ ಇನ್ನಿತರ ಗ್ರಾಮಗಳ ವಿದ್ಯಾರ್ಥಿಗಳು ಧಾರವಾಡದಲ್ಲಿ ಓದುತ್ತಿದ್ದಾರೆ. ಈ ಬಸ್‌ಗಳ ಸೌಲಭ್ಯವಿದೆಂದು ನಮ್ಮ ಹೆಣ್ಣುಮಕ್ಕಳನ್ನು ಧಾರವಾಡದಲ್ಲಿ ಉನ್ನತ ವ್ಯಾಸಾಂಗಕ್ಕೆ ಬಿಟ್ಟಿರುವದಾಗಿ ಪೋಷಕರು ಹೇಳುತ್ತಾರೆ. ಈ ಬಗ್ಗೆ ಘಟಕ ವ್ಯವಸ್ಥಾಪಕರನ್ನು ವಿಚಾರಿಸಿದರೆ ಬಸ್‌ಗಳ ಕೊರತೆ, ಸಿಬ್ಬಂದಿಗಳ ಕೊರತೆ ನೆಪ ಹೇಳುವದು ಮತ್ತು ರಿಕೆ ಉತ್ತರ ನೀಡುತ್ತಿದ್ದಾರೆ. ಮೊದಲಿನಂತೆ ಚಾಲಕ ಮತ್ತು ನಿರ್ವಾಹಕರನ್ನು ಹಟ್ಟಿ- ಹುಬ್ಬಳ್ಳಿ ಮತ್ತು ಹಟ್ಟಿ-ಧಾರವಾಡ ಬಸ್‌ಗಳಿಗೆ ನೇಮಿಸಿ ಸರಿಯಾದ ರೀತಿಯಲ್ಲಿ ಬಸ್‌ಗಳ ಸೌಲಭ್ಯಗಳನ್ನು ಒದಗಿಸಬೇಕೆಂದು ಪಟ್ಟಣದ ನಿವಾಸಿ ಧಾರವಾಡ ವಿಶ್ವವಿದ್ಯಾನಿಲಯದ ಕಾನೂನು ವಿದ್ಯಾರ್ಥಿ ಶಿವರಾಜ ಮೋತಿ, ಪಾಲಕ-ಪೋಷಕರಾದ ಶಿವರಾಜ ಕಂದಗಲ್, ದೇವಪ್ಪ ಕನಸಾವಿ ಸೇರಿದಂತೆ ಪ್ರಯಾಣಿಕರು, ಕಾರ್ಮಿಕರು, ವಿದ್ಯಾರ್ಥಿಗಳು ಅಧಿಕಾರಿಗಳಲ್ಲಿ ಮನವಿ ಮಾಡಿಕೊಂಡಿದ್ದಾರೆ. ಒಂದು ವೇಳೆ ಈ ಬಸ್‌ಗಳ ಸೌಲಭ್ಯವನ್ನು ಮುಂದುವ ರಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಹಮ್ಮಿಕೊಳ್ಳಲಾಗುವದು ಎಂದು ಸಹ ಎಚ್ಚರಿಕೆ ನೀಡಿದ್ದಾರೆ.

# ಮಕ್ಕಳನ್ನು ಅಕ್ಷರವಂತರನ್ನಾಗಿ ಮಾಡಲು ಕರೆ

ನವಲಗುಂದ:-

ಮುಸ್ಲಿಂ ಬಾಂಧವರು ಶೈಕ್ಷಣಿಕವಾಗಿ ಹಿಂದಿದ್ದು, ಪಾಲಕರು ತಮ್ಮ ಮಕ್ಕಳನ್ನು ಶಾಲೆ ಬಿಡಿಸದೆ ನಿತ್ಯ ಕಳುಹಿಸಿ ಅಕ್ಷರವಂತರನ್ನಾಗಿ ಮಾಡಿ ದೇಶದ ಅಭಿವೃದ್ಧಿಗೆ ಕಾರಣರಾಗಬೇಕು ಎಂದು ವಿಜಯಪುರ ಜಿಲ್ಲಾ ಮುಸ್ಲಿಂ ಮುಖಂಡ ಹಾಗೂ ಯುವ ಉದ್ದೇಮಿ ಶಾಹಿದ್ ಹೊರ್ತಿ ಹೇಳಿದರು.




ಅವರು ಪಟ್ಟಣದ ಉಮ್ಮತಿ ಫೌಂಡೇಶನ್ ಕಚೇರಿಗೆ ಭೇಟಿ ನೀಡಿದ ವೇಳೆ ಮಾತನಾಡಿದ ಅವರು ಈ ಭಾಗದ ಮುಸ್ಲಿಂ ಜನಾಂಗದ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ತಾವು ಬದ್ಧ, ಉಮ್ಮತಿ ಫೌಂಡೇಶನ್ ಸಂಸ್ಥೆಯು ಮಕ್ಕಳಿಗೆ ಶಿಕ್ಷಣ ಕೊಡಿಸಲು ಶ್ರಮಿಸುತ್ತಿರುವುದು ಬಹಳ ಸಂತೋಷದ ಸಂಗತಿ, ಶಿಕ್ಷಣ ಹಾಗೂ ಸಮುದಾಯದ ಅಭಿವೃದ್ಧಿಗಾಗಿ ಸದಾ ನಿಮ್ಮ ಜೊತೆ ನಾನಿದ್ದು, ಅಗತ್ಯ ಸಹಕಾರ ನೀಡಲು ಸಿದ್ಧ ಎಂದರು.

ಉಮ್ಮತಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಜಮೀರ್ ಕಾಗದಗಾರ ಮಾತನಾಡಿ ಮುಂಬರುವ ದಿನಗಳಲ್ಲಿ ಸಮಾಜ ಹಿತಚಿಂತಕರಾದ ಶಾಹಿದ್ ಹೊರ್ತಿ ನೇತೃತ್ವದಲ್ಲಿ ಒಂದು ಸಭೆ ಆಯೋಜಿಸಿ ಶೈಕ್ಷಣಿಕವಾಗಿ ವಿವಿಧ ಯೋಜನೆಗಳನ್ನು ಕಾರ್ಯರೂಪಕ್ಕೆ ತಂದು ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಕೆಲಸ ಪ್ರಾರಂಭ ಮಾಡಲಾಗುವುದು ಎಂದರು.


ಇದೆ ವೇಳೆ ಶಾಹಿದ್ ಹೊರ್ತಿಯವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂಧರ್ಭದಲ್ಲಿ ಗದಗ ಜಿಲ್ಲಾ ಮುಸ್ಲಿಂ ಮುಖಂಡರಾದ ಕೆ ಐ ಶೇಖ ಸ್ಥಳೀಯ ಸಂಚಾಲಕರಾದ ಅಬ್ದುಲ್ ಖಾದಿರ ಕುನ್ನಿಭಾವಿ, ಅಂಜುಮನ ಉಪಾಧ್ಯಕ್ಷ ದಾವಲಸಾಬ ಮಸೂತಿ, ಸಂಜೀವಕುಮಾರ, ಕೇದಾರನಾಥ್, ಡಾ. ಅಬ್ದುಲರಝಾಕ ನದಾಫ್, ಸುಭಾನ್ ಬೆಪಾರಿ ಇತರರು ಉಪಸ್ಥಿತರಿದ್ದರು.

# ರಸ್ತೆ ಅಭಿವೃದ್ದಿಗಾಗಿ ಭೂಸ್ವಾಧೀನಕ್ಕೆ ಒಳಪಡುವ ಜಮೀನುಗಳ ರೈತರಿಗೆ ನೋಟಿಸ್

ಮಾನ್ವಿ:-

ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರ ವತಿ ಯಿಂದ ರಾಯಚೂರು ಬಳಿಯ ಕಲ್ಮಲಾ ಜಂಕ್ಷನ್ ನಿಂದ ಸಿಂಧನೂರು ಬಳಿಯ ಬಳ್ಳಾರಿ -ಲಿಂಗಸೂಗೂರು ರಸ್ತೆ ವೃತ್ತದ ವರೆಗಿನ 78.45 ಕಿ.ಮೀ. ಉದ್ದದ ರಸ್ತೆಯನ್ನು ಹೈಬ್ರಿಡ್ ವರ್ಷಾಸನ ಯೋಜ ನೆಯಡಿಯಲ್ಲಿ ಅಭಿವೃದ್ಧಿಗಾಗಿ 48.728 ಕಿ.ಮೀ. ವರೆಗೆ ರಸ್ತೆಯ ಬದಿಯಲ್ಲಿನ ಜಮೀನಿನ ಸ್ವತ್ತುಗಳ ಹಾಗೂ ಇತರೆ ಅಜು-ಬಾಜು ಜಮೀನುಗಳ ಹಾಗೂ ಸ್ವತ್ತುಗಳ ಭೂಸ್ವಾಧೀನಕ್ಕೆ ಸರಕಾರದಿಂದ ಅಧಿಸೂಚನೆ ಹೊರಡಿಸಿದ್ದು ಭೂಸ್ವಾಧೀನಕ್ಕೆ ಒಳಪಡುವ ಜಮೀನುಗಳ ಪರಿಶೀಲನೆ ಹಾಗೂ ಜಂಟಿ ಮೋಜಣಿಗಾಗಿ ಆಳತೆ ಕಾರ್ಯವನ್ನು ತಾಲೂಕಿನ ಬೆಟ್ಟದೂರು ಗ್ರಾಮದಲ್ಲಿ ಜೂ.24 ರಿಂದ ಜುಲೈ8 ರವರೆಗೆ ನಿಗದಿಪಡಿಸಿ ಜಮೀನಿನ ಖಾತೆದಾರರಿಗೆ, ಅನುಭವದಾರರಿಗೆ ,ರೈತರಿಗೆ ಅಗತ್ಯ ದಾಖಲಾತಿಗಳೊಂದಿಗೆ ಹಾಜರಿರುವಂತೆ ನೋಟಿಸ್ ನೀಡಲಾಗಿದೆ. ಬೆಟ್ಟದೂರು ಗ್ರಾಮದ ರೈತ ಶರಣಬಸವ ಪಾಟೀಲ್ ಬೆಟ್ಟದೂರು ಮಾತನಾಡಿ ಕಳೆದ 50 ವರ್ಷಗಳಿಂದ ಗ್ರಾಮದ ರೈತರ ಜಮೀನನ್ನು ರಸ್ತೆಗಾಗಿ ವಶಪಡಿಸಿಕೊಂಡಿದ್ದು ಇದುವರೆಗೂ ರೈತರಿಗೆ ಪರಿಹಾರವನ್ನು ನೀಡಿಲ್ಲ ನೀರವಾರಿ ಭೂಮಿಗಳನ್ನು ಕಂದಾಯ ಇಲಾಖೆಯವರು


ಸಂಖ್ಯೆ:ಕೆ.ಆರ್.ಡಿ.ಸಿ.ಎಲ್./ಭೂ.ಸ್ವಾ/2024-25 ದಿನಾಂಕ:06-06-2024.

ತಿಳುವಳಿಕೆ ಪತ್ರ

(ಕರ್ನಾಟಕ ಹೆದ್ದಾರಿ ಕಾಯ್ದೆ 1964ರ ಕಲಂ.16ರ ಮೇರೆಗೆ)

ಈ ಕೆಳಕಂಡ ಸರ್ವೆ ನಂಬರ್‌ಗಳ ಖಾತೆದಾರರು/ಅನುಭವದಾರರುಗಳ ಮಾಲೀಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಕರ್ನಾಟಕ ಹೆದ್ದಾರಿ ಕಾಯ್ದೆ 1964 ರ ಕಲಂ.15ರ ಮೇರೆಗೆ ರಾಯಚೂರು ಬಳಿಯ ಕಲ್ಮಲಾ ಜಂಕ್ಷನ್‌ನಿಂದ ಸಿಂಧನೂರು ಬಳಿಯ ಬಳ್ಳಾರಿ-ಲಿಂಗಸುಗೂರು ರಸ್ತೆ ವೃತ್ತ ವರೆಗಿನ 78.45 ಕಿ.ಮೀ. ಉದ್ದದ ರಸ್ತೆಯನ್ನು ಹೈಬ್ರಿಡ್ ವರ್ಷಾಸನ ಯೋಜನೆಯಡಿ (HAM) ಅಭಿವೃದ್ಧಿಗಾಗಿ, 0.00 ಕಿ.ಮೀ ರಿಂದ 48.728 ಕಿ.ಮೀ. ವರೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಲೋಇ ಇ-18 ಇಎಪಿ 2024 ದಿನಾಂಕ:22.01.2024ರ ಮೇರೆಗೆ ಅಧಿಸೂಚನೆಯ ಷೆಡ್ಯೂಲ್‌ನಲ್ಲಿ ವಿವರಿಸಿರುವ ಜಮೀನಿನ ಸ್ವತ್ತುಗಳ ಹಾಗೂ ಇತರೆ ಅಜು-ಬಾಜು ಜಮೀನುಗಳಲ್ಲಿನ ಭೂಸ್ವಾಧೀನಕ್ಕೆ ಪ್ರಾಥಮಿಕ ಅಧಿಸೂಚನೆಯನ್ನು ಸರ್ಕಾರದಿಂದ ಅನುಮೋದನೆಗೊಂಡು ಪ್ರಚುರ ಪಡಿಸಲಾಗಿದೆ.

ಸದರಿ ಅಧಿಸೂಚನೆಯ ಷೆಡ್ಯೂಲ್‌ನಲ್ಲಿ ವಿವರಿಸಿರುವ ಜಮೀನುಗಳ/ಸ್ವತ್ತುಗಳ ಭೂಸ್ವಾಧೀನಕ್ಕೆ "ಜಂಟಿ ಮೋಜಣಿ ಆಳತೆ" (JMC) ಕಾರ್ಯವನ್ನು ಜರುಗಿಸಲಾಗುತ್ತಿದ್ದು ಹಾಗೂ ಸ್ವಾಧೀನಕ್ಕೊಳಪಡುವ ಜಮೀನಿನ ಖಾತೆದಾರರ/ಅನುಭವದಾರರನ್ನು ಗುರುತಿಸಬೇಕಾಗಿರುವುದರಿಂದ ರಾಯಚೂರು ತಾಲ್ಲೂಕು ಬೆಟ್ಟದೂರು ಗ್ರಾಮದಲ್ಲಿ ದಿನಾಂಕ: 24-06-2024 ರಿಂದ 08-07-2024 ರವರೆಗೆ ಸ್ಥಳ ಪರಿಶೀಲನೆ ಹಾಗೂ ಜಂಟಿ ಮೋಜಣಿಯನ್ನು ನಿಗದಿಪಡಿಸಲಾಗಿದೆ.

ಆದ್ದರಿಂದ ಸದರಿ ದಿನಾಂಕ ದಂದು ಜಂಟಿ ಮೋಜಣಿ ಆಳತೆ ಕಾರ್ಯವನ್ನು ಸಂದರ್ಭದಲ್ಲಿ ತಾವು ತಮ್ಮ ಹಕ್ಕನ್ನು ಸಮರ್ಥಿಸುವ ಗ್ರಾಮದ ಕಂದಾಯ ದಾಖಲಾತಿಗಳೊಂದಿಗೆ ತಮ್ಮ ಜಮೀನಿನ ಸ್ಥಳದಲ್ಲಿ ಹಾಜರಿರಲು ತಿಳಿಸಲಾಗಿದೆ. ಸದರಿ ದಿನದಂದು ಜಂಟಿ ಮೋಜಣಿ ಕಾರ್ಯ ಅಪೂರ್ಣಗೊಂಡಲ್ಲಿ, ಮುಂದಿನ ದಿನದಂದು ಜಂಟಿ ಮೋಜಣಿ ಕಾರ್ಯ ಹಮ್ಮಿಕೊಳ್ಳಲಾಗುವುದು.

ಷೆಡ್ಯೂಲ್

ಗ್ರಾಮ:ಬೆಟ್ಟದೂರ ಹೋಬಳಿ: ಮಾನ್ವಿ ತಾಲ್ಲೂಕು: ಮಾನ್ವಿ ಜಿಲ್ಲೆ:ರಾಯಚೂರು

ಕಲಂ.15ರ ಪ್ರಾಥಮಿಕ ಅಧಿಸೂಚನೆಯಂತೆ

| ಖಾತೆದಾರರ ಹೆಸರು ಶ್ರೀ/ಶ್ರೀಮತಿ | ಸರ್ವೆ ನಂಬರ್ | ವಿಸ್ತೀರ್ಣ (ಎ.ಗು.ಆ) |
|---|---|---|
| ಈರಮ್ಮ ಗಂ. ಭೀಮನಗೌಡ ರಸ್ತೆ | 40/ಅ | 2.19.00 |
| ನೀಲಾಂಬಿಕೆ ಗಂ.ಚಂದ್ರಶೇಖರಗೌಡ-ಸಾ:ಬೆಟದೂರ ರಸ್ತೆ | 40/ಆ | |
| ಹುಸೇನಪ್ಪ ತಂ ರಾಮಣ್ಣ - ಸಾ ಕಪಗಲ್ | 40/ಇ | |
| ಚಂದಪ್ಪ ತಂ. ಲಚಮಯ್ಯ | 40/ಈ | |
| ಕೆ.ಜಗನ್ನಾಥ ಶೆಟ್ಟಿ ಗಂ.ಕೆ.ನಾರಾಯಣಪ್ಪ ಶೆಟ್ಟಿ ಸಾ.ಮಾನ್ವಿ | 40/2 | |

ಖುಷ್ಕಿ ಎಂದು ಪಹಣಿಗಳಲ್ಲಿ ನಮೂದಿಸಿದು ಕೂಡಲೆ ನೀರಾವರಿ ಎಂದು ತಿದುಪಡಿ ಮಾಡಬೇಕು ರಸ್ತೆಗಾಗಿ ಭೂಮಿಯನ್ನು ಕಳೆದುಕೊಳ್ಳುವ ಎಲ್ಲಾ ರೈತರಿಗೂ ಶೀಘ್ರದಲ್ಲಿಯೇ ಸಮರ್ಪಕವಾದ ಪರಿಹಾರವನ್ನು ನೀಡಬೇಕು ರೈತರ ಸಮುಖದಲ್ಲಿಯೇ ಕಂದಾಯ ಹಾಗೂ ಸರ್ವೆ ಅಧಿಕಾರಿಗಳು ಜಂಟಿ ಮೋಜಣಿ ಮಾಡಬೇಕು ಎಂದು ಒತ್ತಾಯಿಸಿದರು.

# ಬಂಜರು ಭೂಮಿ ಅಭಿವೃದ್ಧಿಪಡಿಸುವುದು ಅಗತ್ಯ

ಕಲಬುರಗಿ:-

ಅತಿಯಾದ ಅಂತರ್ಜಲದ ಬಳಕೆ, ನೀರಿನ ವ್ಯರ್ಥ, ಅರಣ್ಯ ನಾಶ, ಗಣಿಗಾರಿಕೆ, ಮಣ್ಣಿನ ಸವಕಳಿಯಂತಹ ಮುಂತಾದ ಕಾರಣಗಳಿಂದ ಬಂಜರು ಭೂಮಿಯ ಪ್ರಮಾಣ ಹೆಚ್ಚಾಗಿದೆ. ಈ ಪ್ರದೇಶವನ್ನು ಅಭಿವೃದ್ಧಿಪಡಿಸಿ, ಫಲವತ್ತಾದ ಭೂಮಿಯನ್ನಾಗಿಸುವುದು ಅಗತ್ಯವಾಗಿದೆ ಎಂದು ನಿವೃತ್ತ ಕೃಷಿ ಅಧಿಕಾರಿ ಶಿವಯೋಗೆಪ್ಪಾ ಎಸ್.ಬಿರಾದಾರ ಹೇಳಿದರು. ನಗರದ ಖಾದ್ರಿ ಚೌನಲ್ಲಿರುವ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಸೋಮವಾರ ಜರುಗಿದ 'ಅಂತಾರಾಷ್ಟ್ರೀಯ ಬಂಜರು ಮತ್ತು ಮರಭೂಮಿ ತಡೆ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಬಳಗದ ಅಧ್ಯಕ್ಷ ಹಾಗೂ ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಮಣ್ಣು ಬಹು ಅಮೂಲ್ಯವಾದ ನೈಸರ್ಗಿಕ ಸಂಪತ್ತಾಗಿದ್ದು ಅದನ್ನು ರಕ್ಷಿಸಬೇಕು. ಸಾವ ಯುವ ಗೊಬ್ಬರದ ಬಳಕೆ ಮಾಡುವುದು, ಎಲ್ಲೆಡೆ ಅರಣ್ಯಗಳನ್ನು ಬೆಳೆಸಬೇಕಾಗಿದೆ. ಸುಸ್ಥಿರ ಅಭಿವೃದ್ಧಿಗೆ ಬರಗಾಲವು ತೊಡಕಾಗಿದ್ದು, ಅದನ್ನು ಅಭಿವೃದ್ಧಿಪಡಿಸುವ ವೇಗ ಹೆಚ್ಚಳವಾಗಬೇಕಾಗಿದೆ. ನೈಸರ್ಗಿಕ ಸಂಪ



ನ್ಮೂಲಗಳ ಸದ್ಬಳಕೆಯಾಗಬೇಕು. ಶೇ.37ರಷ್ಟು ಬಂಜರು ಭೂಮಿಯಿದೆ. 2050ರ ವೇಳೆಗೆ ದೇಶ ಆಹಾರ ಉತ್ಪಾದನಾ ವಲಯದಲ್ಲಿ ಸ್ವಾವಲಂಬನೆ ಸಾಧಿಸಬೇಕಾದರೆ ಬಂಜ ರು ಭೂಮಿಯನ್ನು ಫಲವತ್ತಾದ ಭೂಮಿ ಯನ್ನಾಗಿಸುವುದು ಅತ್ಯವಶ್ಯಕವಾಗಿದೆ. ಉತ್ತಮ ಜಲಾನಯನ ನಿರ್ವಹಣೆ ಇದಕ್ಕೆ ಪೂರಕವಾದ ಅಂಶವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಪತ್ರಿಕಾ ಕಾರ್ಯದರ್ಶಿ ದೇವೇಂದ್ರಪ್ಪ ಗಣಮುಖಿ, ಪ್ರಮುಖರಾದ ವಿಶ್ವನಾಥ, ತಿರುಮಲೇಶ್, ಶಾಮ್ಯುವೇಲ್, ಈರಣ್ಣ, ವಾಸುದೇವ, ಮೌನೇಶ ಸೇರಿದಂತೆ ಇನ್ನಿತರರು ಇದ್ದರು.

# ಬೆಲೆ ಏರಿಕೆ ಖಂಡಸಿ ಬಿಜೆಪಿ ಪ್ರತಿಭಟನೆ




ಸಿಂಧನೂರು :-

ದಿಢೀರನೇ ಪೆಟ್ರೋಲ್ ,ಡೀಸೆಲ್ ದರ ಏರಿಕೆ ಖಂಡಿಸಿ ಸರ್ಕಾರದ ವಿರುದ್ಧ ಭಾರತೀಯ ಜನತಾ ಪಕ್ಷ ದಿಕ್ಕಾರದ ಘೋಷಣೆಗಳನ್ನು ಕೂಗಿ ಪ್ರತಿಭಟನೆ ನಡೆಸಿದರು. ನಗರದ ಪ್ರವಾಸಿ ಮಂದಿರದಿಂದ ಹೊರಟ ಪ್ರತಿಭಟನೆ ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಆಡಳಿತ ಸರ್ಕಾರದ ವಿರುದ್ಧ ದಿಕ್ಕಾರದ ಘೋಷಣೆ ಗಳನ್ನು ಕೂಗಿ ಆಕ್ರೋಶ ಹೊರ ಹಾಕಿದರು. ಬಿಜೆಪಿ ಮುಖಂಡರಾದ ಎಂ.ದೊಡ್ಡ ಬಸವರಾಜ ಮಾತನಾಡಿ ಮಾರಾಟ ತೆರಿಗೆ ಸೇರಿದಂತೆ ಪ್ರತಿಯೊಂದನ್ನು ಹೆಚ್ಚಿಸಿ ಜನ ವಿರೋಧಿ ಸರ್ಕಾರವಾಗಿದೆ. ತೈಲ ಬೆಲೆ ಹೆಚ್ಚಳ ರೈತರಿಗೆ ,ಮಧ್ಯಮ ವರ್ಗದವರಿಗೆ ಹೊರೆಯಾಗಿದ್ದು ಇದನ್ನು ವಾಪಸ್ಸು ಪಡೆಯಬೇಕು ಇಲ್ಲದಿದ್ದಲ್ಲಿ ಉಗ್ರವಾದ ಹೋರಾಟ ಮಾಡಲಾಗುತ್ತದೆ ಎಂದು ಸರ್ಕಾರಕ್ಕೆ ಈ ಮೂಲಕ ಎಚ್ಚರಿಕೆ ನೀಡಿದರು. ಜಿಲ್ಲಾ ಒಬಿಸಿ ಮೋರ್ಚಾ ಅಧ್ಯಕ್ಷ ಹನುಮೇಶ ಕೆ ಮಾತನಾಡಿ ಕಾಂಗ್ರೆಸ್ ಪಕ್ಷದ ಮುಖಂಡರು ಬಿಜೆಪಿ ಆಡಳಿತಾವಧಿಯಲ್ಲಿ ಪೆಟ್ರೋಲ್, ಡಿಸೇಲ್ ಬೆಲೆ ಏರಿಕೆ ಯಾದಾಗ ಪ್ರತಿಭಟನೆ ಮಾಡಿದ್ದರು. ಈಗ ತಾವೇನು ಮಾಡಿದ್ದಾರೆ ಎಂದು ಪ್ರಶ್ನಿಸಿದರು ಮತ್ತು ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯ ಎಂದರು.

# ಸಾಮೂಹಿಕ ಪ್ರಾರ್ಥನೆ ಮೂಲಕ ಬಕ್ರೀದ್ ಹಬ್ಬ ಆಚರಣೆ

ರಾಯಚೂರು:-

ನಗರ ಸೇರಿದಂತೆ ಜಿಲ್ಲೆಯಾ ದ್ಯಂತ ಬಕ್ರೀದ್ ಹಬ್ಬವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು. ನಗರದ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು, ಸಾಮೂಹಿಕ ಪ್ರಾರ್ಥನೆ ನಿರ್ವಹಿಸಿದರು. ಇದೇ ರೀತಿ ಜಿಲ್ಲೆಯಾದ್ಯಂತ ತಾಲೂಕು ಮತ್ತು ಹೋಬಳಿ ಗ್ರಾಮಮಟ್ಟದ ಈದ್ಗಾ ಮೈದಾನಗಳಲ್ಲಿ ಪ್ರಾರ್ಥನೆ ಸಲ್ಲಿಸುವ ಮೂಲಕ ಹಬ್ಬ ಆಚರಿಸ ಲಾಯಿತು. ಅರಬ್ ಮೊಹಲ್ಲಾ ವೃತ್ತದಲ್ಲಿರುವ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಮೂಲಕ ಶಾಂತಿ, ಸೌಹಾರ್ದತೆ ಕೋರಲಾಯಿತು. ಪ್ರಾರ್ಥನೆಯ ನಂತರ ಮುಸ್ಲಿಂ ಬಾಂಧವರು ಪರಸ್ಪರರನ್ನು ಆಲಿಂಗಿಸಿ ಹಬ್ಬದ ಶುಭ ಕೋರಿದರು. ವಿವಿಧ ಸಮುದಾಯದ ಗಣ್ಯರು ಪ್ರಾರ್ಥನೆಯ ನಂತರ ಹಬ್ಬದ ಶುಭಾಶಯಗಳು ಕೋರಿ ಆಲಿಂಗಿಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಸೈಯದ್ ಯಾಸೀನ್,ಕಾಂಗ್ರೆಸ್ ಮುಖಂಡರಾದ ಮಹ ಮ್ಮದ್ ಶಾಲಂ, ಕಾಂಗ್ರೆಸ್ ಮುಖಂಡರಾದ ಕೆ.ಇ.ಕುಮಾರ, ಅರುಣ ದೋತರಬಂಡಿ ಸೇರಿದಂತೆ ಅನೇಕರು ಈದ್ಗಾ ಮೈದಾನದಲ್ಲಿ ಶುಭಾಶಯ ಕೋರಿದರು.

# ವಾದ್ಯ ಸಂಗೀತದೊಳಗೆ ಲೀನವಾದವರು...

ಖ್ಯಾತ ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ್ ಅವರು ಅಸ್ತಂಗತರಾದ ಈ ಸಂದರ್ಭದಲ್ಲಿ......

ನಾಗರಿಕ ಮನುಷ್ಯ ಊಟ, ವಸತಿ, ಬಟ್ಟೆ, ವಾಹನ ಪ್ರಯಾಣ ಹೀಗೆ ನಾನಾ ಅವಶ್ಯಕತೆಗಳನ್ನು, ಆಧುನಿಕತೆಯನ್ನು ತಾಂತ್ರಿಕತೆಗಳನ್ನು ಪೂರೈಸಿಕೊಳ್ಳುತ್ತಾ ಸಾಕಷ್ಟು ಆರಾಮದಾಯಕ ಬದುಕಿಗಾಗಿ ಪರಿತಪಿಸುವಾಗಲು, ಕೆಲವು ಕ್ಷೇತ್ರಗಳಲ್ಲಿ ಮಹತ್ಸಾಧನೆಗಾಗಿ ಅಥವಾ ಆತ್ಮ ತೃಪ್ತಿಗಾಗಿ ಅದರಲ್ಲಿ ಲೀನವಾಗಲು ಸದಾ ಪ್ರಯತ್ನಿಸುತ್ತಲೇ ಇರುತ್ತಾನೆ.....

ಅಂತಹ ಒಂದು ಕ್ಷೇತ್ರ ಕಲೆಯ ಬಲೆಯಾಗಿರುವ ವಾದ್ಯ ಸಂಗೀತ. ಹರಿಯವ ನೀರಿನ ಜುಳು ಜುಳು ನಿನಾದ, ಸಮುದ್ರದಲೆಗಳ ಭೋರ್ಗರೆತ, ಗಾಳಿಯ ರೊಯ್ಯನೇ ಬೀಸುವ ತಂಗಾಳಿಯ ನಾದ, ಪ್ರಾಣಿ ಪಕ್ಷಿ ಕ್ರಿಮಿಕೀಟಗಳ ಆಹ್ಲಾದಕರ ಸುಶ್ರಾವ್ಯ ಗಾನ, ದಟ್ಟ ಕಾಡುಗಳ, ಹಿಮಾಚ್ಛಾದಿತ ಪ್ರದೇಶಗಳ ವರ್ಣಿಸಲಾಗದ ಧ್ವನಿ ತರಂಗಗಳು, ಮರ ಮುಟ್ಟುಗಳ ವಿವಿಧ ಆಕಾರದ ಧ್ವನಿ ಹೊಮ್ಮಿಸುವ ಶಬ್ದ ನಿನಾದಗಳು, ವಿಧ ವಿಧ ತಂತಿಗಳು ಹೊಮ್ಮಿಸುವ ಸಂಗೀತ ಪ್ರಾಕಾರಗಳು........

ಹಾಗೆಯೇ, ವೀಣೆ, ಕೊಳಲು, ಹಾರ್ಮೋನಿಯಂ, ತಬಲಾ, ಸರೋದ್, ಮೃದಂಗ, ಗೆಜ್ಜೆ, ಪಿಟೀಲು, ತಾಳ, ಮದ್ದಲೆ, ಚೆಂಡೆ, ವೀಣೆ, ಘಟಂ, ಬುಲ್ ಬುಲ್ ತರಂಗ, ಗಂಟೆ, ಸಾರಂಗಿ, ಜಲ ತರಂಗ್, ಏಕತಾರಿ, ಪಿಯಾನೋ, ಮೌತ್ ಆರ್ಗನ್, ತಾಳ, ಜಾಗಟೆ, ಗಿಟಾರ್, ಸಂತೂರ್, ಡೋಲು, ವಯಲಿನ್, ನಾದಸ್ವರ, ಶಹನಾಯಿ, ಡೋಲು, ಡಮರುಗ, ಕೀಬೋರ್ಡ್, ಡ್ರಮ್ಸ್ ಹೀಗೆ ಹಲವಾರು ವಾದ್ಯಗಳು, ಆ ವಾದ್ಯಗಳಲ್ಲಿ ಪರಿಣಿತರಾದ ಮಹಾನ್ ಚೇತನಗಳು, ಅದರ ಮೇಲೆ ಹೊಂದುತ್ತಿದ್ದ ನಿಯಂತ್ರಣ, ಉದಾಹರಣೆಗೆ, ಶಹನಾಯಿಯ ಬಿಸ್ಮಿಲ್ಲಾ ಖಾನ್, ಸರೋದ್ ವಾದನದ ಅಕ್ಬರ್ ಅಲಿ ಖಾನ್, ಪಂಡಿತ್ ರಾಜೀವ್ ತಾರಾನಾಥ್, ಕೊಳಲಿನ ಹರಿಪ್ರಸಾದ್ ಚೌರಾಸಿಯ, ಸೀತಾರಿನ ಪಂಡಿತ್ ರವಿಶಂಕರ್, ಸಂತೂರಿನ ಶಿವಕುಮಾರ್ ಶರ್ಮ, ವೀಣೆಯ ಶೇಷಣ್ಣ, ಡ್ರಮ್ಸ್ ನ ಶಿವಮಣಿ, ತಬಲದ ಜಾಕಿರ್ ಹುಸೇನ್, ಅಲ್ಲಾರಖಾ, ರುದ್ರ ವೀಣೆ-ಯ ಬಿಂದು ಮಾಧವ, ಮ್ಯಾಂಡೋಲಿನಯು, ಶ್ರೀನಿವಾಸ್, ವಯಲಿನ್ ನ ಎಲ್, ಸುಬ್ರಹ್ಮಣ್ಯಂ, ಕುನ್ನುಕುಡಿ ವೈದ್ಯನಾಥನ್, ಗಿಟಾರ್ ನ ಪಂಡಿತ್ ಬ್ರಿಜ್ ಬುಷನ್ ಕಬ್ರಾ, ಪಿಯಾನೋ ದ ಅನಿಲ್ ಶ್ರೀನಿವಾಸನ್...

ಹೀಗೆ ಈ ಕ್ಷಣದಲ್ಲಿ ಹಲವರು ನೆನಪಾಗುತ್ತಿದ್ದಾರೆ. ಈ ವಾದ್ಯ ಸಂಗೀತದೊಂದಿಗೆ ಸಂಪೂರ್ಣ ಲೀನವಾಗಿ ಬದುಕನ್ನು ಸವಿದವರು ಮತ್ತು ಈಗಲೂ ಸವಿಯುತ್ತಿರುವವರು. ಮನುಷ್ಯನ ಆತ್ಮತೃಪ್ತಿಯ ಸಾಧನಗಳಲ್ಲಿ ವಾದ್ಯ ಸಂಗೀತವು ಒಂದು. ಇದು ಹೆಚ್ಚು ಜನರಿಗೆ ಪರಿಚಿತವಲ್ಲ. ಅನುಭವವೂ ಇಲ್ಲ. ಕೇವಲ ಕೆಲವೇ ಸಂಗೀತಾಸಕ್ತರಿಗೆ ಮತ್ತು ಕೆಲವೇ ಕೆಲವು ಅಪರೂಪದ ವ್ಯಕ್ತಿತ್ವಗಳಿಗೆ ಮಾತ್ರ ಈ ವಾದ್ಯ ಸಂಗೀತ ಬದುಕಿನ ಭಾಗವಾಗುತ್ತದೆ ಸಾರ್ಥಕತೆಯ ಸಾಧನವಾಗುತ್ತದೆ.....

ನಮ್ಮಂತ ಜನಸಾಮಾನ್ಯರು ಬದುಕಿನ ಜಂಜಾಟಗಳ ನಡುವೆ, ಈ ಕಾರ್ಪೋರೇಟ್ ಕೊಳ್ಳುಬಾಕ ಸಂಸ್ಕೃತಿಯ ಬದುಕಿನಲ್ಲಿ, ಜೀವನದ ಅಗತ್ಯತೆಗಳು, ಅವಶ್ಯಕತೆಗಳನ್ನು ಮೀರಿ ಯೋಚಿಸಲು ಸಾಧ್ಯವಾಗುತ್ತಿಲ್ಲ. ಎಷ್ಟೋ ಸ್ವಾಭಾವಿಕ ಸಹಜ ಪ್ರತಿಭೆಗಳು ಮುರುಟಿ ಹೋಗುವುದನ್ನು ಕಣ್ಣಾರ ಕಾಣುತ್ತಿದ್ದೇವೆ..ಇಂತಹ ಸಂದರ್ಭದಲ್ಲಿ ಸರೋದ್ ವಾದ್ಯದಲ್ಲಿ ಸಂಪೂರ್ಣ ಲೀನವಾದ ರಾಜೀವ್ ತಾರಾನಾಥ್ ಅವರು ಬದುಕನ್ನು ಮೊಗೆ ಮೊಗೆದು ಅನುಭವಿಸಿದವರು. ಅದರಲ್ಲಿ ತತ್ವಜ್ಞಾನಿಯಂತೆ ಚಿಂತಿಸಿದವರು, ಜ್ಞಾನಾಸಕ್ತ ಮತ್ತು ಧ್ಯಾನಾಸಕ್ತರಾದವರು. ಅವರಿಗೆ ಶ್ರದ್ಧಾಂಜಲಿ ಸಲ್ಲಿಸುತ್ತಾ.....

ಅತ್ಯಂತ ಭೀಕರವಾಗಿ ಕಾಡಿದ ತಾಪಮಾನ, ಸುಮಾರು 75 ದಿನಗಳ ಚುನಾವಣಾ ರಾಜಕೀಯದ ತಲೆಬಿಸಿ, ಪ್ರಜ್ವಲ್ ರೇವಣ್ಣನ ಕಾಮ ಪುರಾಣ, ದರ್ಶನನ ಕ್ರೌರ್ಯ ಮುಂತಾದ ಬ್ರೇಕಿಂಗ್ ನ್ಯೂಸ್ ಗಳ ಮಧ್ಯೆ ಬಿಡುವು ಪಡೆದು, ಸಂಗೀತ ಸಾಗರದೊಳಗೆ ಧ್ಯಾನಸ್ಥವಾಗಲಿ ನಮ್ಮ ಮನಸ್ಸು.ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ.

-ವಿವೇಕಾನಂದ.ಎಚ್.ಕೆ. 9844013068...

Editor:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Publisher:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Printer:S.K.Wadeyar, SUCHITHRA PRINTERs & PUBLISHERs # 69 "VISPATHI",B,Block S.O.G.Colony Davanagere-577005,Karnataka
Owner:S.K.Wadeyar, #69 "VISPATHI", B,Block S.O.G.Colony, Davanagere-577005,Karnataka